ಸಂಪುಟ : 11 ಸಂಚಿಕೆ: 86 ಪುಟ : 4+2 ಬೆಲೆ: 3.00 ಮಂಗಳವಾರ ಮೇ 05 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 86 Pages : 4+2 Price : 3.00 Tuesday May 5 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಡ್ಯಾನ್ಸಿಂಗ್ ಫ್ಲೋರ್ ತೊಟ್ಟಿಲು ಕಳಚಿ 21 ಜನರಿಗೆ ಗಾಯ। ಆಯೋಜಕರ ವಿರುದ್ಧ ಆಕ್ರೋಶ

# ತೋಂಟದಾರ್ಯ ಮಠದ ಜಾತ್ರೆಯಲ್ಲಿ ಭೀಕರ ದುರಂತ!

■ವಿಜಯಸಾಕ್ಷಿ ಸುದ್ದಿ, ಗದಗ

ಮನರಂಜನೆಗಾಗಿ ಜಾತ್ರೆಗೆ ಆಗಮಿಸಿದ್ದ ಭಕ್ತರಿಗೆ ತೆ-ೂಂಟದಾರ್ಯ ಮಠದ ಜಾತ್ರೆಯಲ್ಲಿ ಭೀಕರ ಅನುಭವ ಎದುರಾಗಿದೆ. ಡ್ಯಾನ್ಸಿಂಗ್ ಫ್ಲೋರ್ ಯಂತ್ರದ ತೊಟ್ಟಿಲುಗಳು ಏಕಾಏಕಿ ಕಳಚಿ ಕೆಳಗೆ ಬಿದ್ದ ಪರಿಣಾಮ 21 ಜನರು ಗಾಯಗೊಂಡಿದ್ದು, ಅವರಲ್ಲಿ ಇಬ್ಬರ ಸ್ಥಿತಿ ಗಂಭೀರವಾಗಿದೆ.

ಎಪ್ರಿಲ್ 1ರಿಂದ ನಡೆಯುತ್ತಿರುವ ತೋಂಟದಾರ್ಯ ಮಠದ ಜಾತ್ರೆಯಲ್ಲಿ ಡ್ಯಾನ್ಸಿಂಗ್ ಫ್ಲೋರ್, ಬ್ರೇಕ್ ಡ್ಯಾನ್ಸ್, ಜೋಕಾಲಿ ಸೇರಿದಂತೆ ವಿವಿಧ ಮನರಂಜನಾ ಆಟಿಕೆಗಳನ್ನು ಅಳವಡಿಸಲಾಗಿತ್ತು. ನೂರಾರು ಭಕ್ತರು ಕುಟುಂಬ ಸಮೇತರಾಗಿ ಜಾತ್ರೆಯಲ್ಲಿ ಪಾಲ್ಗೊಂಡು ಮನರಂಜನೆ ಪಡೆಯುತ್ತಿದ್ದ ವೇಳೆ ಈ ದುರಂತ ಸಂಭವಿಸಿದೆ.

ಘಟನೆಯ ಸಮಯದಲ್ಲಿ ಡ್ಯಾನ್ಸಿಂಗ್ ಫ್ಲೋರ್ ತೊಟ್ಟಿಲಿನಲ್ಲಿ ಕುಳಿತಿದ್ದವರು ಖುಷಿಯಿಂದ ಆಟವಾಡುತ್ತಿದ್ದರು. ಆದರೆ ಏಕಾಏಕಿ ಯಂತ್ರದಲ್ಲಿ ತಾಂತ್ರಿಕ ದೋಷ ಉಂಟಾಗಿ ತೊಟ್ಟಿಲುಗಳು ಕಳಚಿ ಕೆಳಗೆ ಬಿದ್ದಿವೆ. ತೊಟ್ಟಿಲಿನಲ್ಲಿದ್ದವರು ಹಾಗೂ ಕೆಳಭಾಗದಲ್ಲಿ ಇದ್ದವರು



"ಯಂತ್ರಚಾಲಿತ ಆಟಿಕೆಗಳಿಗೆ ಸುರಕ್ಷತಾ ಕ್ರಮಗಳನ್ನು ಪಾಲಿಸದಿರುವುದು ಈ ದುರಂತ-ಕ್ಕೆ ಕಾರಣ. ಹೊಣೆಗಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು,"
**– ರಾಜು ಖಾನಪ್ಪನವರ, ಹೋರಾಟಗಾರ**

"ನಾವು ಖುಷಿಯಾಗಿ ಡ್ಯಾನ್ಸಿಂಗ್ ಫ್ಲೋರ್ ಆಟವಾಡುತ್ತಿದ್ದೇವೆ. ಏಕಾಏಕಿ ತೊಟ್ಟಿಲು ಕಳಚಿ ಕೆಳಗೆ ಬಿದ್ದಿತು. ನಾವು ಏನೂ ಅರ್ಥವಾಗುವ ಮುನ್ನವೇ ನೆಲಕ್ಕುರುಳಿದ್ದೇವೆ,"
**– ಸತೀಶ್, ಗಾಯಾಳು**

**ಪೊಲೀಸರಿಂದ ವ್ಯಾಪಾರಸ್ಥರ ತೆರವು**

ದುರಂತ ನಡೆದ ನಂತರ ಶಹರ ಪೊಲೀಸರು ಜಾತ್ರೆಯಲ್ಲಿನ ಅಂಗಡಿಗಳನ್ನು ಬಲವಂತವಾಗಿ ಬಂದ್ ಮಾಡಿಸಿದರು. ಧ್ವನಿ ವರ್ಧಕಗಳ ಮೂಲಕ ಇತರರಿಗೂ ಅಂಗಡಿ ಬಂದ್ ಮಾಡುವಂತೆ ಎಚ್ಚರಿಕೆ ನೀಡಲಾಯಿತು.

ಯಂತ್ರದ ಅಡಿಯಲ್ಲಿ ಸಿಲುಕಿ ನರಳಾಡಿದ ದೃಶ್ಯಗಳು ಸ್ಥಳದಲ್ಲಿ ಭೀತಿಯ ವಾತಾವರಣವನ್ನು ಸೃಷ್ಟಿಸಿದ್ದವು.

ಅವಘಡದ ನಂತರ ತಕ್ಷಣವೇ ಸ್ಥಳೀಯರು ಹಾಗೂ ಸಿಬ್ಬಂದಿ ಗಾಯಾಳುಗಳನ್ನು ರಕ್ಷಿಸಿ ಅಂಬ್ಯುಲೆನ್ಸ್ ಮೂಲಕ ಆಸ್ಪತ್ರೆಗೆ ರವಾನಿಸಿದರು. ಗಾಯಗೊಂಡ 19 ಮಂದಿಗೆ ಗದಗ ಜಿಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದ್ದು, ಗಂಭೀರವಾಗಿ ಗಾಯಗೊಂಡ ಇಬ್ಬರನ್ನು ಹೆಚ್ಚಿನ ಚಿಕಿತ್ಸೆಗಾಗಿ ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಗೆ ಕಳುಹಿಸಲಾಗಿದೆ.

▸▸ 3ನೇ ಪುಟಕ್ಕೆ

## ಇಂದು ಶ್ರೀ ಗಾಳೆಮ್ಮ ದೇವಿ ಉಡಿ ತುಂಬುವ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ



ಪಟ್ಟಣ ಹಾಗೂ ತಾಲೂಕಿನ ಹಳ್ಳಿಗಳಲ್ಲಿ ಪ್ರಸಿದ್ಧಿ ಪಡೆದಿರುವ ನಗರ ದೇವತೆ ಶ್ರೀ ಗಾಳೆಮ್ಮ ದೇವಿ, ಭಕ್ತರ ಬೇಡಿಕೆಗಳನ್ನು ನೆರವೇರಿಸಿ ಆಶೀರ್ವದಿಸುವ ದೇವಿಯಾಗಿ ಹೆಸರುವಾಸಿಯಾಗಿದ್ದು, ಪ್ರತಿ ವರ್ಷದಂತೆ ಈ ವರ್ಷವೂ ಉಡಿ ತುಂಬುವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಸಕಲ ಭಕ್ತರು ತನು, ಮನ, ಧನ ಸಹಕಾರದೊಂದಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗಬೇಕು ಎಂದು ಆಯೋಜಕರು ವಿನಂತಿಸಿದ್ದಾರೆ.

ದಿ. 05-05-2026, ಮಂಗಳವಾರ ಬೆಳಿಗ್ಗೆ 10.30 ಗಂಟೆಗೆ ಪಂಚಾಮೃತ ಅಭಿಷೇಕ ಹಾಗೂ ಉಡಿ ತುಂಬುವ ಕಾರ್ಯಕ್ರಮ, ಮಹಾ ಮಂಗಳಾರತಿ ನಡೆಯಲಿದ್ದು, ನಂತರ ದೇವಿಯ ಪ್ರಸಾದ ವ್ಯವಸ್ಥೆ ಇರುತ್ತದೆ ಎಂದು ತಿಳಿಸಿದ್ದಾರೆ.

ಈ ಕಾರ್ಯಕ್ರಮವನ್ನು ಶ್ರೀ ಗಾಳೆಮ್ಮ ದೇವಿ ಸೇವಾ ಟ್ರಸ್ಟ್ (ರಿ) ಹಾಗೂ ನಾಣಿಕೇರಿ ದೈವಸ್ಥರು, ರಾಮನಗರ, ಹಗರಿಬೊಮ್ಮನಹಳ್ಳಿ ವತಿಯಿಂದ ಆಯೋಜಿಸಲಾಗಿದೆ.

## ಕೆರೆಯಲ್ಲಿ ಮುಳುಗಿ ನಾಲ್ವರು ಮಕ್ಕಳು ಸಾವು!

■ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ಕೆರೆಯಲ್ಲಿ ಮುಳುಗಿ ನಾಲ್ವರು ಮಕ್ಕಳು ಮೃತಪಟ್ಟಿದ್ದಾರೆ. ಈ ದಾರುಣ ಘಟನೆ ಚಿಕ್ಕಮಗಳೂರಿನ ಅರಳುಗುಪ್ಪೆ ಗ್ರಾಮದಲ್ಲಿ ನಡೆದಿದೆ.

ಮೃತ ಮಕ್ಕಳನ್ನು ಅಬ್ದುಲ್ ರೆಹಮಾನ್ (9), ನಯಾಜ್ (12), ಮದಿನಾ ಬಾನು (9) ಹಾಗೂ ಆರುನ್ (8) ಎಂದು ಗುರುತಿಸಲಾಗಿದೆ. ಇವರು ಗ್ರಾಮದಲ್ಲಿರುವ ಕೆರೆಯ ಬಳಿ ಆಟವಾಡಲು ತೆರಳಿದ್ದ ವೇಳೆ ಅನಾಹುತ ಸಂಭವಿಸಿದೆ ಎಂದು ತಿಳಿದು ಬಂದಿದೆ.

ಮಕ್ಕಳು ಆಟವಾಡುವ ವೇಳೆ ಕಾಲು ಜಾರಿ ಕೆರೆಗೆ ಬಿದ್ದಿರುವ ಸಾಧ್ಯತೆ ಇದ್ದು, ತಕ್ಷಣ ನೆರವಿಗೆ ಯಾರೂ ಲಭ್ಯವಾಗದ ಕಾರಣ ನಾಲ್ವರೂ ನೀರುಪಾಲಾಗಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಘಟನೆಯ ಬಗ್ಗೆ ತಿಳಿದು ಸ್ಥಳೀಯರು ತಕ್ಷಣ ಧಾವಿಸಿ ರಕ್ಷಣಾ ಕಾರ್ಯಾಚರಣೆ ನಡೆಸಿದರೂ, ಮಕ್ಕಳನ್ನು ಬದುಕಿಸಲು ಸಾಧ್ಯವಾಗಲಿಲ್ಲ.

### ಕಾರ್ಯಕರ್ತರ ಸಮ್ಮುಖದಲ್ಲಿ ಸರಳ ಸಮಾರಂಭ– ಸರ್ವಾಂಗೀಣ ಅಭಿವೃದ್ಧಿಗೆ ಭರವಸೆ

# ಪುರಸಭೆ ನೂತನ ಅಧ್ಯಕ್ಷೆಯಾಗಿ ರೇಷ್ಮಾ ಸಿಕಂದರ್ ಅಧಿಕಾರ ಸ್ವೀಕಾರ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಇತ್ತೀಚೆಗೆ ಪುರಸಭೆಯ ನೂತನ ಅಧ್ಯಕ್ಷೆಯಾಗಿ ಆಯ್ಕೆಯಾದ ರೇಷ್ಮಾ ಸಿಕಂದರ್ ಅವರು ಸೋಮವಾರ ಪುರಸಭೆ ಆಡಳಿತ ಕಚೇರಿಯಲ್ಲಿ ಪ್ರಭಾರಿ ಅಧ್ಯಕ್ಷರಿಂದ ಅಧಿಕಾರ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಅವರ ಅಭಿಮಾನಿಗಳು, ಆಡಳಿತ ವರ್ಗದವರು, ಸ್ನೇಹಿತರು, ಹಿತೈಷಿಗಳು, ಬಂಧುಗಳು ಹಾಗೂ ಮಿತ್ರರು ಆಗಮಿಸಿ ಪುಷ್ಪಗುಚ್ಛ, ಶಾಲು ಹಾಗೂ

ಇಂದಿನ ಪುರಸಭೆ ನೂತನ ಅಧ್ಯಕ್ಷೆಯ ಪದಗ್ರಹಣ ಸಮಾರಂಭದಲ್ಲಿ ಬಹುತೇಕ ಪುರಸಭೆ ಸದಸ್ಯರ ಗೈರು ಒಂದು ರೀತಿಯ ಮುಜುಗರ ಉಂಟುಮಾಡಿತು. ಮುಖ್ಯವಾಗಿ ಇಸ್ಮಾಯಿಲ್ ಸಾಬ್, ಅಜೀಜುಲ್ಲಾ, ಖಾಜಾಬನ್ನಿ ಅಲ್ಲಾಭಕ್ಷಿ ಸೇರಿದಂತೆ ಹಲವರು ಗೈರಾಗಿದ್ದರು. ಬಿಜೆಪಿ ಸದಸ್ಯರು ಕಾರ್ಯಕ್ರಮದಲ್ಲಿ ಕಾಣಿಸದಿದ್ದರೂ, ಅಧ್ಯಕ್ಷೆಯ ಬೆಂಬಲಿಗರು ಹಾಗೂ ಹಿತೈಷಿಗಳ ಹಾಜರಾತಿ ಗಮನಾರ್ಹವಾಗಿತ್ತು.



ಹೂವಿನ ಹಾರ ಹಾಕಿ ಸ್ವಾಗತಿಸಿದರು. ಕಚೇರಿಯಲ್ಲಿ ಹಬ್ಬದ ಸಂಭ್ರಮ ಮನೆಮಾಡಿತ್ತು.

ಅಧಿಕಾರ ಸ್ವೀಕರಿಸಿದ ಬಳಿಕ ಮಾತನಾಡಿದ ರೇಷ್ಮಾ ಸಿಕಂದರ್ ಅವರು, ಪುರಸಭೆಯ ಎಲ್ಲಾ ವಾರ್ಡ್‌ಗಳ ಸರ್ವಾಂಗೀಣ ಅಭಿವೃದ್ಧಿಗೆ ಆದ್ಯತೆ ನೀಡುವುದಾಗಿ ತಿಳಿಸಿದರು. ಆಡಳಿತ ವ್ಯವಸ್ಥೆಯಲ್ಲಿ ಎಲ್ಲರ ಸಹಕಾರ ಅಗತ್ಯವಿದ್ದು, ಇದು ಏಕವ್ಯಕ್ತಿ ಆಡಳಿತವಲ್ಲ. ಪುರಸಭೆ ಸಿಬ್ಬಂದಿ ಹಾಗೂ ಸದಸ್ಯರ ಸಹಕಾರದಿಂದ ಮಾತ್ರ ಆಡಳಿತ ಯಶಸ್ವಿಯಾಗುತ್ತದೆ ಎಂದರು.

ಸಾರ್ವಜನಿಕರು ತಮ್ಮ ಸಮಸ್ಯೆಗಳಿಗಾಗಿ ನೇರವಾಗಿ ತಮ್ಮನ್ನು ಅಥವಾ ಸದಸ್ಯರನ್ನು ಸಂಪರ್ಕಿಸಬೇಕು, ಮಧ್ಯವರ್ತಿಗಳ ಮೂಲಕ ಬರಬಾರದು ಎಂದು ಸಲಹೆ ನೀಡಿದರು.

ತಾವು ಅಧಿಕಾರಕ್ಕೆ ಬರಲು ಕಾರಣರಾದ ಮಾಜಿ ಶಾಸಕ ಭೀಮಾನಾಯ್ಕ, ಸಂಸದ ಈ. ತುಕಾರಾಂ, ಅಪಾರ ಬೆಂಬಲಿಗರು ಹಾಗೂ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಡಾ. ಸಾಹಿರಾ ಬಾನು ಸೇರಿದಂತೆ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.

"ಹಗರಿಬೊಮ್ಮನಹಳ್ಳಿ ಪುರಸಭೆಯ 23 ವಾರ್ಡುಗಳಲ್ಲಿ ಕುಡಿಯುವ ನೀರು, ಚರಂಡಿ, ಸಿಸಿ ರಸ್ತೆ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಎಲ್ಲ ಸದಸ್ಯರೊಂದಿಗೆ ಸೇರಿ ಅಭಿವೃದ್ಧಿಪಡಿಸಲಾಗುತ್ತದೆ,"
**– ರೇಷ್ಮಾ ಸಿಕಂದರ್, ಪುರಸಭೆ ಅಧ್ಯಕ್ಷೆ**

ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಡಾ. ಸಾಹಿರಾ ಬಾನು ಮಾತನಾಡಿ, ಪುರಸಭೆ ಒಂದು ಕುಟುಂಬದಂತೆ ಕಾರ್ಯನಿರ್ವಹಿಸಬೇಕು. ಪರಸ್ಪರ ಸಹಕಾರ ಮತ್ತು ಏಕತೆಯಿಂದ ಅಭಿವೃದ್ಧಿ ಸಾಧ್ಯ ಎಂದು ಹೇಳಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೋರಿ ಗೋಣಿ ಬಸಪ್ಪ ಮಾತನಾಡಿ, ಮಹಿಳೆಯರಿಗೆ ಆದ್ಯತೆ ನೀಡುವ ಮೂಲಕ ಪಕ್ಷವು ಪುರಸಭೆಯಲ್ಲಿ ಮಹಿಳಾ ಪರ್ವಕ್ಕೆ ಚಾಲನೆ ನೀಡಿದೆ ಎಂದು ಹೇಳಿದರು.

▸▸ 4ನೇ ಪುಟಕ್ಕೆ



ಕೊಪ್ಪಳ: ತಾಲೂಕಿನ ಮೈನಹಳ್ಳಿ ಗ್ರಾಮದಲ್ಲಿ ಶ್ರೀ ಶಿವಶರಣೆ ಬುಡ್ಡಮ್ಮದೇವಿಯ ರಥೋತ್ಸವ ಅದ್ದೂರಿಯಾಗಿ ಜರುಗಿತು.ರಥೋತ್ಸವದ ಅಂಗವಾಗಿ ನಡೆದ ಬಾವುಟ ಹರಾಜಿನಲ್ಲಿ ಹೊನ್ನಕೆರಪ್ಪ ಮುದಕಪ್ಪ ಮುಸ್ಟೆಕೊಪ್ಪ ಅವರು ರೂ. 4,05,101 ಮೊತ್ತಕ್ಕೆ ಬಾವುಟವನ್ನು ಪಡೆದುಕೊಂಡರು. ರಥೋತ್ಸವದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಆಶೀರ್ವಾದ ಪಡೆದುಕೊಂಡರು. ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

### ತಮಿಳುನಾಡು, ಬಂಗಾಳ, ಅಸ್ಸಾಂ ಸೇರಿದಂತೆ ಹಲವು ರಾಜ್ಯಗಳಲ್ಲಿ ಇಂಡಿ ಒಕ್ಕೂಟಕ್ಕೆ ತಿರಸ್ಕಾರ : ವಸಂತ ಪಡಗದ

## ಪಂಚರಾಜ್ಯ ಚುನಾವಣೆಯಲ್ಲಿ ಹಿಂದೂ ವಿರೋಧಿಗಳಿಗೆ ತಕ್ಕ ಪಾಠ

■ವಿಜಯಸಾಕ್ಷಿ ಸುದ್ದಿ, ಗದಗ

ಸೋಮವಾರ ಪ್ರಕಟವಾದ ಪಶ್ಚಿಮ ಬಂಗಾಳ, ಅಸ್ಸಾಂ, ಕೇರಳ, ತಮಿಳುನಾಡು ಹಾಗೂ ಪುದುಚೇರಿ ಪಂಚರಾಜ್ಯಗಳ ಚುನಾವಣಾ ಫಲಿತಾಂಶಗಳು ದೇಶದ ರಾಜಕೀಯ ದಿಕ್ಕನ್ನು ಇನ್ನಷ್ಟು ಸ್ಪಷ್ಟವಾಗಿ ತೋರಿಸಿವೆ ಎಂದು ಬಿಜೆಪಿ ಯುವ ಮುಖಂಡ ವಸಂತ ಪಡಗದ ತಿಳಿಸಿದ್ದಾರೆ.

ಪಂಚರಾಜ್ಯ ಚುನಾವಣಾ ಫಲಿತಾಂಶ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಈ ಬಾರಿ ವಿಶೇಷವಾಗಿ ತಮಿಳುನಾಡು, ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ರಾಜ್ಯಗಳಲ್ಲಿ ಹಿಂದೂ ವಿರೋಧಿ ನೀತಿಗಳನ್ನು ಅನುಸರಿಸಿಕೊಂಡು ಬಂದಿದ್ದ ಇಂಡಿ ಒಕ್ಕೂಟ ಬೆಂಬಲಿಸುವ ರಾಜಕೀಯ ಪಕ್ಷಗಳಿಗೆ ಮತದಾರರು ತಿರಸ್ಕಾರ ನೀಡುವ ಮೂಲಕ ತಕ್ಕ ಪಾಠ ಕಲಿಸಿದ್ದಾರೆ ಎಂದು ಹೇಳಿದ್ದಾರೆ.

ಈ ಬಾರಿ ಫಲಿತಾಂಶಗಳು ಬಹುತೇಕ ಎಲ್ಲಾ ಎಕ್ಸಿಟ್ ಪೋಲ್‌ಗಳ ಅಂದಾಜುಗಳನ್ನು ಮೀರಿರುವುದು



ಗಮನಾರ್ಹ ವಾಗಿದೆ ಎಂದರು.

ತಮಿಳುನಾಡಿನಲ್ಲಿ ಪ್ರಥಮ ಪ್ರಯತ್ನದಲ್ಲೇ ನಟ ವಿಜಯ ಅವರ ಗೆಲವು ಕೇವಲ ತಮಿಳುನಾಡಿನಷ್ಟೇ ಅಲ್ಲ, ದೇಶದ ರಾಜಕೀಯ ಇತಿಹಾಸದಲ್ಲಿಯೂ ವಿಶೇಷವಾಗಿದೆ. ಟಿವಿಕೆ ಗೆಲುವಿನ ಮೂಲಕ ಅಲ್ಲಿನ ಮತದಾರರು ಪ್ರಾದೇಶಿಕ ಪಕ್ಷದತ್ತ ಮತ್ತೊಮ್ಮೆ ಒಲವು ತೋರಿಸಿದ್ದಾರೆ ಎಂದು ಹೇಳಿದರು.

ಇನ್ನು ಕೇರಳದಲ್ಲಿ ಇಂಡಿ ಕೂಟ ಪರ ಫಲಿತಾಂಶ ಬಂದಿದ್ದರೂ ಬಿಜೆಪಿಗೆ ಮತದಾರರು ಉತ್ತಮ ಬೆಂಬಲ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಕೇರಳವೂ ಬಿಜೆಪಿ ವಶವಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

"ಹಿಂದೂ ವಿರೋಧಿ ನೀತಿಗಳಿಗೆ ಮತದಾರರು ತಕ್ಕ ಪಾಠ ಕಲಿಸಿದ್ದಾರೆ. ಬಿಜೆಪಿ ಕಾರ್ಯಕರ್ತರು ಹಾಗೂ ಪಕ್ಷಕ್ಕೆ ಮತ ನೀಡಿದ ಎಲ್ಲರಿಗೂ ಹೃತ್ಪೂರ್ವಕ ಅಭಿನಂದನೆಗಳು,"
**– ವಸಂತ ಪಡಗದ,** ಬಿಜೆಪಿ ಯುವ ಮುಖಂಡ

ಪಶ್ಚಿಮ ಬಂಗಾಳದಲ್ಲಿ 'ದೀದಿ' ಸರ್ಕಾರವನ್ನು ಮನೆಗೆ ಕಳುಹಿಸಿ ಇದೇ ಮೊದಲ ಬಾರಿಗೆ ಕೇಸರಿ ಅಧಿಕಾರದ ಚುಕ್ಕಾಣಿ ಹಿಡಿದಿದೆ. ಬಂಗಾಳಕ್ಕೆ ಹಿಡಿದಿದ್ದ 'ದೀದಿ ಗ್ರಹಣ'ದಿಂದ ಜನರು ಮುಕ್ತರಾಗಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಪುದುಚೇರಿ ಮತ್ತು ಅಸ್ಸಾಂ ರಾಜ್ಯಗಳಲ್ಲಿ ಬಿಜೆಪಿ ಸ್ಪಷ್ಟ ಬಹುಮತ ಪಡೆದಿದ್ದು, ಪ್ರಜ್ಞಾವಂತ ಮತದಾರರು ಆಮಿಷಗಳಿಗೆ ಒಳಗಾಗದೆ ಪ್ರಧಾನಿ ಮೋದಿ ಅವರ ಆಡಳಿತದ ಬಿಜೆಪಿ ಅಜೆಂಡಾವನ್ನು ಒಪ್ಪಿಕೊಂಡಿದ್ದಾರೆ ಎಂದು ಹೇಳಿದರು.

## ಪಶ್ಚಿಮ ಬಂಗಾಳದ ಜನತೆ ಬೇಸತ್ತು ಬಿಜೆಪಿಗೆ ಆಶೀರ್ವಾದ ನೀಡಿದ್ದಾರೆ

■ವಿಜಯಸಾಕ್ಷಿ ಸುದ್ದಿ, ಗದಗ



ಮಮತಾ ಬ್ಯಾನರ್ಜಿ ಅವರ ಆಡಳಿತ ಅವಧಿಯಲ್ಲಿ ಪಶ್ಚಿಮ ಬಂಗಾಳದ ಜನತೆ ಬೇಸತ್ತು ಬಿಜೆಪಿಗೆ ಆಶೀರ್ವಾದ ನೀಡಿದ್ದಾರೆ ಎಂದು ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ತೋಟಪ್ಪ (ರಾಜು) ಕುರುಡಗಿ ಹೇಳಿದ್ದಾರೆ. ಭಾರತೀಯ ಜನತಾ ಪಾರ್ಟಿಗೆ ಪಶ್ಚಿಮ ಬಂಗಾಳ ಹಾಗೂ ಆಸ್ಸಾಂ ರಾಜ್ಯಗಳಲ್ಲಿ ಲಭಿಸಿದ ಅಭೂತಪೂರ್ವ ಗೆಲುವಿನ ಕುರಿತು ಅವರು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿ ಸಂತಸ ವ್ಯಕ್ತಪಡಿಸಿರುವ ಅವರು, ದೇಶದ ಪ್ರಧಾನಿ ನರೇಂದ್ರ ಮೋದಿ ಅವರ ಕಾರ್ಯವೈಖರಿಯನ್ನು ಮೆಚ್ಚಿದ ಜನತೆ, ದೇಶದ ಸುರಕ್ಷತೆ ಹಾಗೂ ಅಭಿವೃದ್ಧಿಗಾಗಿ ಅವರ ಕೈಬಲಪಡಿಸುವ ಉದ್ದೇಶದಿಂದ ಬಿಜೆಪಿಗೆ ಬೆಂಬಲ ನೀಡಿದ್ದಾರೆ ಎಂದು ಅಭಿಪ್ರಾಯಪಟ್ಟರು. ಈ ಗೆಲುವಿಗೆ ಕಾರಣಕರ್ತರಾದ ಪ್ರಧಾನಮಂತ್ರಿ ನರೇಂದ್ರ ಮೋದಿ, ರಾಷ್ಟ್ರೀಯ ಅಧ್ಯಕ್ಷರಾದ ನಿತೀನ್ ನಬೀನ್, ಕೇಂದ್ರ ಗೃಹ ಸಚಿವರಾದ ಅಮಿತ್ ಶಾ ಹಾಗೂ ಹಗಲಿರುಳು ಶ್ರಮಿಸಿದ ಪಕ್ಷದ ಲಕ್ಷಾಂತರ ಕಾರ್ಯಕರ್ತರಿಗೆ ಅಭಿನಂದನೆ ಸಲ್ಲಿಸಿದರು. ಜನಪರ ಯೋಜನೆಗಳನ್ನು ಬೆಂಬಲಿಸಿ, ರಾಷ್ಟ್ರೀಯ ಹಿತಾಸಕ್ತಿಯ ಪರವಾಗಿ ಮತ ಚಲಾಯಿಸಿದ ಮತದಾರರಿಗೆ ತೋಟಪ್ಪ (ರಾಜು) ಕುರುಡಗಿ ಅವರು ಕೃತಜ್ಞತೆಗಳನ್ನು ತಿಳಿಸಿದ್ದಾರೆ.

### ಅಂಗಾರಕ ಸಂಕಷ್ಟಿ ನಿಮಿತ್ತ ಶ್ರೀ ಕೈಲಾಸ ವರಸಿದ್ಧಿ ಗಣಪತಿ ದೇವಸ್ಥಾನದಲ್ಲಿ । ಗಣಹೋಮ । ಶ್ರೀ ರಂಗ ಪೂಜೆ ಅನ್ನ ಸಂತರ್ಪಣೆ

## ಇಂದು ವಿಶೇಷ ಪೂಜಾ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಮಂಗಳವಾರ, ದಿನಾಂಕ 05-05-2026ರಂದು ಅಂಗಾರಕ ಸಂಕಷ್ಟಿ ನಿಮಿತ್ತ ಲೋಕ ಕಲ್ಯಾಣಾರ್ಥವಾಗಿ ಶ್ರೀ ಕೈಲಾಸ ವರಸಿದ್ಧಿ ಗಣಪತಿ ದೇವಸ್ಥಾನದಲ್ಲಿ ಬೆಳಿಗ್ಗೆಯಿಂದ ರಾತ್ರಿವರೆಗೆ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

05-05-2026 ಮಂಗಳವಾರ ದಂದು ಶ್ರೀ ಕೈಲಾಸ ವರಸಿದ್ಧಿ ಗಣಪತಿ ದೇವಸ್ಥಾನದಲ್ಲಿ ಬೆಳಿಗ್ಗೆ 7.00 ಗಂಟೆಗೆ ಫಲ-ಪಂಚಾಮೃತ ಅಭಿಷೇಕ, ಬೆಳಿಗ್ಗೆ 11.00 ಗಂಟೆಗೆ ಗಣಹೋಮ, ಸಂಜೆ 7.30ಕ್ಕೆ ಸಂಕಷ್ಟಿ ಪೂಜೆ, ಶ್ರೀ ರಂಗ ಪೂಜೆ ಹಾಗೂ ಪಲ್ಲಕ್ಕಿ ಸೇವೆ ನಡೆಯಲಿದೆ. ರಾತ್ರಿ 9.59ಕ್ಕೆ ಚಂದ್ರೋದಯವಾದ ನಂತರ ರಾತ್ರಿ 10.00 ಗಂಟೆಗೆ ಸಾರ್ವಜನಿಕ ಅನ್ನಸಂತರ್ಪಣೆ ಜರುಗಲಿದೆ.

ಅಂಗಾರಕ ಸಂಕಷ್ಟಿಯ ವಿಶೇಷ ಪೂಜಾ



ಕಾರ್ಯಕ್ರಮಗಳಲ್ಲಿ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತನು, ಮನ, ಧನದಿಂದ ಸೇವೆಗೈದು ಶ್ರೀ ಗಣಪತಿಯ ಕೃಪೆಗೆ ಪಾತ್ರರಾಗಬೇಕೆಂದು ಶ್ರೀ ಕೈಲಾಸ ವರಸಿದ್ಧಿ ಗಣಪತಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷರಾದ ಬಿ. ಪ್ರಸನ್ನಕುಮಾರ, ಕಾರ್ಯದರ್ಶಿ ಯೋಗೇಶ ವೋರಾ, ಕೋಶಾಧ್ಯಕ್ಷರಾದ ಪ್ರದೀಪಕುಮಾರ, ವ್ಯವಸ್ಥಾಪಕರಾದ ರಾಮಚಂದ್ರ ಹೆಗಡೆ ಸೇರಿದಂತೆ ಇತರ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ವಿನಂತಿಸಿದ್ದಾರೆ.


### ಬಾಗಲಕೋಟ, ದಾವಣಗೆರೆ ಉಪಚುನಾವಣೆ ಹಾಗೂ ಕೇರಳದಲ್ಲಿ ಯುಡಿಎಫ್ ಜಯ ಹಿನ್ನೆಲೆ

## ಕಾಂಗ್ರೆಸ್ ಗೆಲುವು ಸಂಭ್ರಮಕ್ಕೆ ಗದಗದಲ್ಲಿ ವಿಜಯೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ದಾವಣಗೆರೆ ಮತ್ತು ಬಾಗಲಕೋಟ ವಿಧಾನಸಭೆ ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವು ಹಾಗೂ ಕೇರಳದಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಗೆಲುವು ಸಾಧಿಸಿ ಅಧಿಕಾರದ ಚುಕ್ಕಾಣಿ ಹಿಡಿಯುತ್ತಿರುವ ಹಿನ್ನಲೆಯಲ್ಲಿ, ದಿನಾಂಕ 05-05-2026ರಂದು ಮಂಗಳವಾರ ಬೆಳಿಗ್ಗೆ 10 ಗಂಟೆಗೆ ಗದಗ ನಗರದ ಹುಯಿಲಗೋಳ ನಾರಾಯಣರಾವ ವೃತ್ತ (ಟಾಂಗಾ ಕೂಟ)ದಲ್ಲಿ ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯಿಂದ ವಿಜಯೋತ್ಸವ ಆಚರಿಸಲಾಗುವುದು.

ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯತ್, ತಾಲೂಕ ಪಂಚಾಯತ್, ಗ್ರಾಮ ಪಂಚಾಯತ್, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯ್ತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಪ್ರಚಾರ ಸಮಿತಿ,



ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವಿಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲೀಗಲ್ ರೀಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು ಹಾಗೂ ಪಕ್ಷದ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಅವರು ಪತ್ರಿಕಾ ಪ್ರಕಟಣೆ ಮೂಲಕ ವಿನಂತಿಸಿದ್ದಾರೆ.

**ಚಿತ್ರದುರ್ಗ ಕಾರ್ಯಕ್ರಮಕ್ಕೆ 15 ಸಾವಿರಕ್ಕೂ ಹೆಚ್ಚು ಜನರ ನಿರೀಕ್ಷೆ –ಬಲ್ಲಾಹುಣ್ಸಿ ರಾಮಣ್ಣ ಪತ್ರಿಕಾಗೋಷ್ಠಿ**

# ಬಿ.ಎಸ್.ವೈ ಅಭಿಮಾನೋತ್ಸವಕ್ಕೆ ಸಿದ್ಧತೆ




■ **ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಇದೇ ತಿಂಗಳ 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಬಿ.ಎಸ್. ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಹಗರಿಬೊಮ್ಮನಹಳ್ಳಿ ಕ್ಷೇತ್ರದಿಂದ ಭಾರೀ ಸಿದ್ಧತೆ ನಡೆದಿದ್ದು, ಸುಮಾರು 15 ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸುವ ನಿರೀಕ್ಷೆ ಇದೆ ಎಂದು ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಬಲ್ಲಾಹುಣ್ಸಿ ರಾಮಣ್ಣ ಹೇಳಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಅಭಿಮಾನೋತ್ಸವ ಸಿದ್ಧತೆ ಕುರಿತು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಯಡಿಯೂರಪ್ಪ ಅವರು ಸ್ಥಳೀಯ ಸಂಸ್ಥೆಗಳ ಪ್ರತಿನಿಧಿಯಿಂದ ಮುಖ್ಯಮಂತ್ರಿವರೆಗೆ ಹುದ್ದೆಗಳನ್ನು ಅಲಂಕರಿಸಿ ರಾಜ್ಯಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಮಹಿಳಾ ಯೋಜನೆಗಳು ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಅವರು ಶಕ್ತಿಮೀರಿದ ಸೇವೆ ಸಲ್ಲಿಸಿದ್ದಾರೆ ಎಂದು ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಆರ್. ಸಂಜೀವರೆಡ್ಡಿ ಮಾತನಾಡಿ, ಚಿತ್ರದುರ್ಗದಲ್ಲಿ ನಡೆಯುವ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಗೋವಿಂದ ಕಾರಜೋಳ ಅಧ್ಯಕ್ಷತೆ ವಹಿಸಲಿದ್ದು, ಕಾರ್ಯದರ್ಶಿ ಪ್ರಭಾಕರ ಕೋರೆ ಪ್ರಮುಖ ಜವಾಬ್ದಾರಿ ವಹಿಸಲಿದ್ದಾರೆ ಎಂದು ತಿಳಿಸಿದರು. ಕರ್ನಾಟಕದ ಭೀಷ್ಮ ಎಂದೇ ಹೆಸರು ಪಡೆದ ಯಡಿಯೂರಪ್ಪ ಅವರು ರಾಜ್ಯದಲ್ಲಿ ಬಿಜೆಪಿ ಬೆಳವಣಿಗೆಗೆ ಮಹತ್ತರ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಬಿಜೆಪಿ ಮಂಡಲ ಅಧ್ಯಕ್ಷ ಬೆಣಕಲ್ ಪ್ರಕಾಶ್ ಮಾತನಾಡಿ, ಕಾರ್ಯಕ್ರಮದಲ್ಲಿ ಸುಮಾರು ಹತ್ತು ಲಕ್ಷ ಜನ ಸೇರುವ ನಿರೀಕ್ಷೆ ಇದೆ. ಕೇಂದ್ರದಿಂದ ಅಮಿತ್ ಷಾ ಸೇರಿದಂತೆ ಪ್ರಮುಖ ನಾಯಕರು ಆಗಮಿಸಲಿದ್ದಾರೆ. ಹಗರಿಬೊಮ್ಮನಹಳ್ಳಿ ಕ್ಷೇತ್ರದಿಂದ ಬಸ್ಸು, ಟ್ರ್ಯಾಕ್ಸ್ ಹಾಗೂ ಕಾರುಗಳ ಮೂಲಕ ಜನರು ತೆರಳಲಿದ್ದು, ವಿಜಯನಗರ ಜಿಲ್ಲೆಯಿಂದಲೇ ಸುಮಾರು 50 ಸಾವಿರ ಜನ ಭಾಗವಹಿಸುವ ನಿರೀಕ್ಷೆ ಇದೆ ಎಂದು ಹೇಳಿದರು.

ಇದೇ ವೇಳೆ ಪುರಸಭೆ ಅಧ್ಯಕ್ಷರ ಚುನಾವಣೆಯಲ್ಲಿ ಪಕ್ಷದ ಮೂವರು ಸದಸ್ಯರು ಭಾಗವಹಿಸದ ವಿಚಾರವಾಗಿ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಸಂಬಂಧಿತ ಸದಸ್ಯರ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು. ಪಕ್ಷಕ್ಕಿಂತ ವ್ಯಕ್ತಿಗಳು ದೊಡ್ಡವರಲ್ಲ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ಬಣಕಾರ ಸುರೇಶ, ನಾಗರಾಜ್ ಜನ್ನು, ನಬೀನ್ ಸಂಜ್ಯೋತ, ಬಿಜೆಪಿ ಮುಖಂಡರಾದ ಕನಕಪ್ಪ, ಸಂದೀಪ ಶಿವಮೊಗ್ಗ, ಯುವ ಘಟಕದ ಅಧ್ಯಕ್ಷ ಮಂಜುನಾಥ ಹಿರೇಮಠ, ಅಂಬಳಿ ರವಿ, ಕಾರ್ಯಾಲಯ ಕಾರ್ಯದರ್ಶಿ ಸಂದೀಪ ಕಡಲಬಾಳು ಸೇರಿದಂತೆ ಹಲವರು ಉಪಸ್ಥಿತರಿದ್ದರು. ಯುವ ಘಟಕದ ಕಾರ್ಯದರ್ಶಿ ದಿವಾಕರ ಗೌಡ ಸ್ವಾಗತಿಸಿದರು. ಮಂಜುನಾಥ ಹಿರೇಮಠ ವಂದಿಸಿದರು.

> “ಚಿತ್ರದುರ್ಗದಲ್ಲಿ ನಡೆಯುವ ಅಭಿಮಾನೋತ್ಸವಕ್ಕೆ ಹಗರಿಬೊಮ್ಮನಹಳ್ಳಿ ಕ್ಷೇತ್ರದಿಂದಲೇ 15 ಸಾವಿರಕ್ಕೂ ಹೆಚ್ಚು ಜನರನ್ನು ಕರೆದುಕೊಂಡು ಹೋಗುವ ಸಿದ್ಧತೆ ಮಾಡಲಾಗಿದೆ.”
> – **ಬಲ್ಲಾಹುಣ್ಸಿ ರಾಮಣ್ಣ,** ಜಿಲ್ಲಾ ಬಿಜೆಪಿ ಉಪಾಧ್ಯಕ್ಷ


**ಮುಂಗಾರು ಆರಂಭದ ನಡುವೆ ನೀರಾವರಿ ವ್ಯವಸ್ಥೆ ಸ್ಥಗಿತ | 2 ಸಾವಿರ ಎಕರೆ ಬೆಳೆ ಭವಿಷ್ಯ ಅತಂತ್ರ!**

# ಕಾಲುವೆಗಳಲ್ಲಿನ ಹೂಳು ಸ್ವಚ್ಛತೆಗೆ ರೈತರ ಗಡುವು

■ **ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮ ವ್ಯಾಪ್ತಿಗೆ ಒಳಪಡುವ ಚಿಕ್ಕ ನೀರಾವರಿ ಇಲಾಖೆಯ ಕೆರೆ ನೀರಾವರಿ ಕಾಲುವೆಗಳು ಹೂಳು, ಮುಳ್ಳು ಹಾಗೂ ಕಂಟಿಗಳಿಂದ ಸಂಪೂರ್ಣವಾಗಿ ಮುಚ್ಚಿಕೊಂಡಿರುವುದರಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ಹಿನ್ನೆಲೆಯಲ್ಲಿ ಡಂಬಳ ಗ್ರಾಮದ ಉಪ ತಹಸೀಲ್ದಾರ್ ಕಚೇರಿಗೆ ಭೇಟಿ ನೀಡಿದ ರೈತರು ತಕ್ಷಣ ಕಾಲುವೆಗಳನ್ನು ಸ್ವಚ್ಛಗೊಳಿಸುವಂತೆ ಮನವಿ ಸಲ್ಲಿಸಿದರು.

ಮುಂಗಾರು ಹಂಗಾಮು ಆರಂಭವಾಗುತ್ತಿರುವ ಈ ಪ್ರಮುಖ ಸಂದರ್ಭದಲ್ಲಿ ಕೆರೆಯಲ್ಲಿ ನೀರಿನ ಲಭ್ಯತೆ ಸಾಕಷ್ಟಿದ್ದರೂ ಕಾಲುವೆಗಳ ದುರವಸ್ಥೆಯಿಂದ ನೀರು ಹೊಲಗಳಿಗೆ ತಲುಪದೇ ಅಸಮಾಧಾನಕರ ಸ್ಥಿತಿ ನಿರ್ಮಾಣವಾಗಿದೆ. ಸುಮಾರು ಎರಡು ಸಾವಿರ ಎಕರೆ ಕೃಷಿಭೂಮಿಗೆ ಈ ಕಾಲುವೆಗಳ ಮೂಲಕವೇ ನೀರಾವರಿ ಸಿಗುತ್ತಿದ್ದು, ಅನೇಕ ಕುಟುಂಬಗಳು ಇದನ್ನೇ ಅವಲಂಬಿಸಿಕೊಂಡಿವೆ. ಆದರೆ ಕಾಲುವೆಗಳು ಸಂಪೂರ್ಣ ಹೂಳು ತುಂಬಿಕೊಂಡಿರುವುದರಿಂದ ಬೆಳೆಗಳಿಗೆ



ನೀರು ಸಿಗದೇ ಆರ್ಥಿಕ ಹಿನ್ನಡೆಯ ಭೀತಿ ಎದುರಿಸುತ್ತಿದ್ದಾರೆ.

ರೈತರು ಸಂಬಂಧಿಸಿದ ಅಧಿಕಾರಿಗಳು ತಕ್ಷಣ ಸ್ಥಳ ಪರಿಶೀಲನೆ ನಡೆಸಿ ಸ್ವಚ್ಛತಾ ಕಾರ್ಯ ಆರಂಭಿಸಬೇಕು ಎಂದು ಒತ್ತಾಯಿಸಿದರು. ಎಂಟು ದಿನಗಳೊಳಗೆ ಕ್ರಮ ಕೈಗೊಳ್ಳದಿದ್ದರೆ ಇಲಾಖೆಯ ಕಚೇರಿ ಮುಂದೆ ಬೃಹತ್ ಪ್ರಮಾಣದಲ್ಲಿ ಉಪವಾಸ ಸತ್ಯಾಗ್ರಹ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ರೈತ ಬುಡ್ನೆಸಾಬ ಅತ್ತಾರ ಮನವಿ ಓದಿ ಕಂದಾಯ ಇಲಾಖೆಯ ಅಧಿಕಾರಿ ಎಂ.ಎಂ. ವಿಭೂತೆ ಅವರಿಗೆ ಸಲ್ಲಿಸಿದರು. ಮನವಿ ಸ್ವೀಕರಿಸಿದ ಅವರು ಹಿರಿಯ ಅಧಿಕಾರಿಗಳಿಗೆ ಇಮೇಲ್ ಮೂಲಕ ಮಾಹಿತಿ ನೀಡಿ ಶೀಘ್ರ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

> “ಕಾಲುವೆಗಳು ಹೂಳು ತುಂಬಿಕೊಂಡಿರುವುದರಿಂದ ನೀರು ಹೊಲಗಳಿಗೆ ತಲುಪುತ್ತಿಲ್ಲ. ತಕ್ಷಣ ಸ್ವಚ್ಛಗೊಳಿಸದಿದ್ದರೆ ಬೆಳೆ ಹಾನಿ ಅನಿವಾರ್ಯ.”
> – **ರೈತರು**

ಈ ಸಂದರ್ಭದಲ್ಲಿ ರಾಮಪ್ಪ ಯಂಡಿಗೇರಿ, ಮಲ್ಲಪ್ಪ ಗಡಗಿ, ಶಿವಪ್ಪ ಬಂಡಿ, ರಾಜಪ್ಪ ಪಟ್ಟಣಶೆಟ್ಟಿ, ರಾಜಶೇಖರ ಪಟ್ಟಣಶೆಟ್ಟಿ, ಎಸ್.ಆರ್. ಪಲ್ಲೇದ, ಹುಸೇನಸಾಬ ಕಾಸ್ತಾರ, ಮಂಜುನಾಥ ಕೆರಿ, ಜಾಕೀರ ಮೂಲಿಮನಿ, ಎಂ.ಎನ್. ಕೋರ್ಲಹಳ್ಳಿ, ಎಂ.ಎಸ್. ಪಲ್ಲೇದ, ವಿ.ವೈ. ರಾಘಣ್ಣವರ, ಎಚ್.ವೈ. ಗಡಗಿ, ಬಸವರಾಜ ಪಟ್ಟಣಶೆಟ್ಟಿ, ಅಶೋಕ ಚಿಕರಡ್ಡಿ, ಮಂಜುನಾಥ ಕರದಾನಿ, ಪರಮೇಶ ಓಲೇಕಾರ ಸೇರಿದಂತೆ ಅನೇಕ ರೈತರು ಉಪಸ್ಥಿತರಿದ್ದರು.

**ಅಡವಿ ಸಿದ್ದೇಶ್ವರ 71ನೇ ಪುಣ್ಯಸ್ಮರಣೆ : 31 ಸರ್ವಧರ್ಮ ಸಾಮೂಹಿಕ ವಿವಾಹಗಳು**

# ಅಡಂಬರ ಮದುವೆಗಳಿಗೆ ಕಡಿವಾಣ ಅಗತ್ಯ

■ **ವಿಜಯಸಾಕ್ಷಿ ಸುದ್ದಿ, ರೋಣ**

ಸರ್ವಧರ್ಮ ಸಾಮೂಹಿಕ ವಿವಾಹಗಳು ನಡೆಯುವುದರಿಂದ ಬಡವರು ಮತ್ತು ಮಧ್ಯಮ ವರ್ಗದ ಜನರ ಆರ್ಥಿಕ ಸುಧಾರಣೆ ಸಾಧ್ಯ ಎಂದು ನರಗುಂದ ಪತ್ರಿವನ ಮಠದ ಪೂಜ್ಯರಾದ ಸಿದ್ದವೀರ ಶಿವಾಚಾರ್ಯರು ಹೇಳಿದರು.

ಕೊತಬಾಳ ಗ್ರಾಮದ ಅಡವಿ ಸಿದ್ದೇಶ್ವರ ಶ್ರೀಮಠದಲ್ಲಿ ಜರುಗಿದ ಸಿದ್ದೇಶ್ವರ 71ನೇ ಪುಣ್ಯಸ್ಮರಣೆ, ರಾಜಶೇಖರ ಶಿವಯೋಗಿಗಳ 25ನೇ ಪುಣ್ಯಸ್ಮರಣೆ ಹಾಗೂ ರಥೋತ್ಸವದ ಅಂಗವಾಗಿ ನಡೆದ 31 ಸರ್ವಧರ್ಮ ಸಾಮೂಹಿಕ ವಿವಾಹಗಳ ಕಾರ್ಯಕ್ರಮವನ್ನು ಉದ್ಘಾಟಿಸಿ ಆಶೀರ್ವಚನ ನೀಡಿ ಮಾತನಾಡಿದ ಶ್ರೀಗಳು, ಇಂದಿನ ದಿನಗಳಲ್ಲಿ ಅಡಂಬರದ ಮದುವೆಗಳಿಗೆ ಅನಗತ್ಯ ಖರ್ಚು ಹೆಚ್ಚಾಗುತ್ತಿದ್ದು, ಸಾಲ ಮಾಡಿ ಮದುವೆ ಮಾಡುವ ಬದಲು ಸಾಮೂಹಿಕ



ವಿವಾಹಗಳಲ್ಲಿ ಪಾಲ್ಗೊಳ್ಳುವುದರಿಂದ ಕುಟುಂಬದ ಆರ್ಥಿಕ ಸ್ಥಿತಿ ಸುಧಾರಿಸುತ್ತದೆ ಎಂದು ಹೇಳಿದರು. ಮದುವೆಯ ನಂತರ ದಂಪತಿಗಳು ಪರಸ್ಪರ ಗೌರವ, ಪ್ರೀತಿ ಮತ್ತು ಜವಾಬ್ದಾರಿಯಿಂದ ಬದುಕಬೇಕು ಎಂದು ಸಲಹೆ ನೀಡಿದರು.

ಕೊತಬಾಳದ ಅಡವಿ ಸಿದ್ದೇಶ್ವರ ಮಠವು ರಾಜ್ಯದಲ್ಲೇ ಮೊದಲಾಗಿ ಸಾಮೂಹಿಕ ವಿವಾಹಗಳನ್ನು ಆರಂಭಿಸಿದ ಇತಿಹಾಸ ಹೊಂದಿದ್ದು, ಜಾತಿ-ಧರ್ಮ ಭೇದವಿಲ್ಲದೆ ಎಲ್ಲರನ್ನು ಅಪ್ಪಿಕೊಳ್ಳುವ ಭಾವೈಕ್ಯತೆಯ ಕೇಂದ್ರವಾಗಿ ಬೆಳೆಯುತ್ತಿದೆ ಎಂದು ಅವರು ಶ್ಲಾಘಿಸಿದರು.

ಕಾರ್ಯಕ್ರಮದ ಪೂರ್ವದಲ್ಲಿ ಗ್ರಾಮದಲ್ಲಿ ಅಡ್ಡಪಲ್ಲಕ್ಕಿ ಮಹೋತ್ಸವ ಹಾಗೂ 201 ಮಹಿಳೆಯರಿಂದ ಕುಂಭಮೇಳ ನಡೆಯಿತು.

> “ಸಾಮೂಹಿಕ ವಿವಾಹಗಳಲ್ಲಿ ಪಾಲ್ಗೊಳ್ಳುವುದರಿಂದ ಅನಗತ್ಯ ಖರ್ಚು ತಪ್ಪಿ, ಕುಟುಂಬದ ಆರ್ಥಿಕ ಸ್ಥಿತಿ ಸುಧಾರಿಸುತ್ತದೆ.”
> – **ಸಿದ್ದವೀರ ಶಿವಾಚಾರ್ಯರು**

ಸಾವಿರಾರು ಭಕ್ತರು ಉತ್ಸವದಲ್ಲಿ ಭಾಗವಹಿಸಿ ಭಕ್ತಿ ಭಾವವನ್ನು ಪ್ರದರ್ಶಿಸಿದರು. ನಂತರ ಶ್ರೀಮಠದ ಆವರಣದಲ್ಲಿ ದಾಸೋಹ ಕಾರ್ಯಕ್ಕೆ ಚಾಲನೆ ನೀಡಲಾಯಿತು.

ಡಾ. ಕೊಟ್ಟೂರೇಶ್ವರ ಶ್ರೀಗಳು, ಚನ್ನಬಸವ ಶ್ರೀಗಳು, ಶಿವಪೂಜಾ ಶಿವಾಚಾರ್ಯ ಶ್ರೀಗಳು, ಕೈಲಾಸಲಿಂಗ ಶ್ರೀಗಳು ಸಾನಿಧ್ಯ ವಹಿಸಿದ್ದರು. ಮುಖಂಡರಾದ ಶಿವಪ್ಪ ಪಲ್ಲೇದ, ವೀರಣ್ಣ ಯಾಳಗಿ, ಶಂಕ್ರಣ್ಣ ಸಂಕಣ್ಣವರ ಸೇರಿದಂತೆ ಗ್ರಾಮದ ಹಿರಿಯರು ಉಪಸ್ಥಿತರಿದ್ದರು.

# ರಂಭಾಪುರಿ ಜಗದ್ಗುರುಗಳಿಗೆ ಆಹ್ವಾನ



■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ನಗರದ ಶ್ರೀ ಮಹಾಂತಿನ ಮಠಕ್ಕೆ ಸೋಮವಾರ ಭೇಟಿ ನೀಡಿದ ರಾಜ್ಯ ಬಿಜೆಪಿ ಅಧ್ಯಕ್ಷರು ಹಾಗೂ ಶಿಕಾರಿಪುರ ಕ್ಷೇತ್ರದ ಶಾಸಕರಾದ ಬಿ. ವೈ. ವಿಜಯೇಂದ್ರ ಅವರು ಚಿತ್ರದುರ್ಗದಲ್ಲಿ ನಡೆಯಲಿರುವ ಮಾಜಿ ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪನವರ ಅಭಿಮಾನೋತ್ಸವ ಸಮಾರಂಭಕ್ಕೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳನ್ನು ಆಹ್ವಾನಿಸಿದರು. ಈ ಸಂದರ್ಭದಲ್ಲಿ ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಸೇರಿದಂತೆ ಇತರ ಗಣ್ಯರು ಉಪಸ್ಥಿತರಿದ್ದರು.

# ವ್ಯಾಪಾರಿಯ ಮೇಲೆ ಹಲ್ಲೆ: ಜೀವ ಬೆದರಿಕೆ ಹಾಕಿ ಹಣ ಕಿತ್ತು ಮೂವರು ಪರಾರಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಲಕ್ಷ್ಮೇಶ್ವರ ಪಟ್ಟಣದ ಬಸ್ ನಿಲ್ದಾಣದ ಸಾರ್ವಜನಿಕ ಶೌಚಾಲಯದಲ್ಲಿ ವ್ಯಾಪಾರಿಯೊಬ್ಬರ ಮೇಲೆ ಮೂವರು ಆರೋಪಿಗಳು ಹಲ್ಲೆ ನಡೆಸಿ ರೂ . 7,700 ನಗದು ದೋಚಿದ ಘಟನೆ ನಡೆದಿದೆ.

ಈ ಸಂಬಂಧ ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳ ಪತ್ತೆಗಾಗಿ ಪೊಲೀಸರು ಶೋಧ ಕಾರ್ಯಾಚರಣೆ ಆರಂಭಿಸಿದ್ದಾರೆ.

ಮೂಲತಃ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಸೋಲಾಪುರ ಗ್ರಾಮದ ಮಹಾದೇವ ಕಲ್ಲಪ್ಪ ಗೋಳಭಾವಿ (29) ಹಲ್ಲೆಗೊಳಗಾಗಿ ಹಣ ಕಳೆದುಕೊಂಡ ವ್ಯಾಪಾರಿ.

ಎಪ್ರಿಲ್ 25ರಂದು ರಾತ್ರಿ ಸುಮಾರು




10 ಗಂಟೆ ವೇಳೆಗೆ, ಮಹಾದೇವ ಅವರು ಲಕ್ಷ್ಮೇಶ್ವರ ಬಸ್ ನಿಲ್ದಾಣದ ಸಾರ್ವಜನಿಕ ಶೌಚಾಲಯದಲ್ಲಿ ಇದ್ದಾಗ, ಆರೋಪಿಗಳಾದ

ವಿನಾಯಕ @ ವಿನಾಯಕ ಗದಗ (A1), ಮಹೇಶ್ @ ಮಹೇಶ್ ಗದಗ (02), ಶಂಕರ್ @ ಶಂಕರ್ ಗದಗ (03) ಎಂಬ ಮೂವರು ಒಟ್ಟಾಗಿ ಬಂದು ಹಲ್ಲೆ ನಡೆಸಿದ್ದಾರೆ.

ಆರೋಪಿಗಳು “ನಿನ್ನ ಬಳಿ ಇರುವ ಹಣ ಮತ್ತು ಮೊಬೈಲ್ ಕೊಡದಿದ್ದರೆ ಕೊಲ್ಲುತ್ತೇವೆ” ಎಂದು ಜೀವ ಬೆದರಿಕೆ ಹಾಕಿ, ದೈಹಿಕ ಹಲ್ಲೆ ನಡೆಸಿ, ಜೇಬಿನಲ್ಲಿ ಇದ್ದ ರೂ. 7,700 ನಗದು ಹಣವನ್ನು ಬಲವಂತವಾಗಿ ಕಿತ್ತುಕೊಂಡು ಪರಾರಿಯಾಗಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಈ ಕುರಿತು ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತೆ (ಃಓಖ) 2023ರ ಸೆಕ್ಷನ್‌ಗಳು 308(5), 351(2), 352, 3(5) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದು, ಆರೋಪಿಗಳ ಬಂಧನಕ್ಕೆ ಕ್ರಮ ಕೈಗೊಂಡಿದ್ದಾರೆ.

# ತೋಂಟದಾರ್ಯ ಜಾತ್ರಾ ಮಳಿಗೆ ತೆರವುಗೊಳಿಸಲು ಆಗ್ರಹ

■ **ವಿಜಯಸಾಕ್ಷಿ ಸುದ್ದಿ, ಗದಗ**

ತೋಂಟದಾರ್ಯ ಜಾತ್ರಾ ಮಹೋತ್ಸವದಲ್ಲಿ ಅಳವಡಿಸಲಾದ ಮಳಿಗೆಗಳನ್ನು ಕೂಡಲೇ ತೆರವುಗೊಳಿಸಬೇಕೆಂದು ಆಗ್ರಹಿಸಿ ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ದಲಿತ ಸಮಿತಿ ಹಾಗೂ ಮಾದಿಗ ಸಮುದಾಯದ ಮುಖಂಡರು ತಮ್ಮ ಬೆಂಬಲವನ್ನು ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಕರ್ನಾಟಕ ರಾಜ್ಯ ವಿವಿಧ ಹಿಂದೂಪರ ಸಂಘಟನೆಗಳ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ರಾಜು ಖಾನಪ್ಪನವರ, ತೋಂಟ-ದಾರ್ಯ ಮಠದ ಜಾತ್ರೆಯಲ್ಲಿ ಸಂಭವಿಸಿದ ಭೀಕರ ಅಪಘಾತ ಅತ್ಯಂತ ದುಃಖಕರ ಸಂಗತಿಯಾಗಿದೆ ಎಂದರು. ಜಾತ್ರೆಗಳಿಗೆ ನಿರ್ದಿಷ್ಟ ದಿನಾಂಕ ಮತ್ತು ನಿಯಮಾವಳಿ ಇದ್ದರೂ,



ಇಲ್ಲಿ ಅನಿಯಂತ್ರಿತವಾಗಿ ಮಳಿಗೆಗಳನ್ನು ಅಳವಡಿಸಿರುವುದು ಈ ಅವಘಡಕ್ಕೆ ಕಾರಣವಾಗಿದೆ ಎಂದು ದೂರಿದರು.


ಈ ಘಟನೆಗೆ ಜಿಲ್ಲಾಡಳಿತ, ನಗರಸಭೆ ಹಾಗೂ ಮಳಿಗೆ ಟೆ-ಂಡರ್‌ದಾರರ ನಿರ್ಲಕ್ಷ್ಯವೇ ನೇರ ಕಾರಣವಾಗಿದೆ ಎಂದು ಅವರು ಆರೋಪಿಸಿದರು. 2016ರಿಂದಲೇ ಅನಧಿಕೃತ ಮಳಿಗೆಗಳ ವಿರುದ್ಧ ಹೋರಾಟ ನಡೆಸುತ್ತಾ ಬಂದಿದ್ದರೂ, ಜಿಲ್ಲಾಡಳಿತ ಹಾಗೂ ನಗರಸಭೆ ನಿರ್ಲಕ್ಷ್ಯ ಧೋರಣೆ ತಾಳುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ನಿರ್ಲಕ್ಷ್ಯದ ಪರಿಣಾಮವಾಗಿ 20ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದು, ಇಬ್ಬರ ಸ್ಥಿತಿ ಚಿಂತಾಜನಕವಾಗಿದೆ. ಸಾವು-ನೋವು ಸಂಭವಿಸಿದಲ್ಲಿ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದರು.

ಮನವಿ ಸಲ್ಲಿಸುವ ವೇಳೆ ಮಹೇಶ್ ರೋಖಡೆ, ಸತೀಶ್ ಕುಂಬಾರ, ವೆಂಕಟೇಶ್ ದೊಡ್ಡಮನಿ, ಕುಮಾರ್ ನಡಿಗೇರಿ, ಪಿ.ಎಸ್. ಕಾಳೆ, ಪರಶುರಾಮ್ ಆಡಿನ, ಸದಾನಂದ್ ಸಿಂಗ್, ಗುರ್ಲ್ ಹೊಸೂರ, ಶಿವಯೋಗಿ ಹಿರೇಮಠ, ಮೌನೇಶ್ ದಾಸರ್, ಈರಪ್ಪ ವಾಲ್ಮೀಕಿ, ಮಂಜು ಪೂಜಾರ್, ಮಂಜು ಗುಡಿ, ರಾಮು ಗೌಡ್ರು, ಅಶೋಕ್ ಭಜಂತ್ರಿ, ಸಂಜು ಚಟ್ಟಿ, ಈರಣ್ಣ ಪೂಜಾರಿ, ಅಭಿಷೇಕ್ ಕುರ್ತ್, ಕೋಟಿ, ರಾಘವೇಂದ್ರ ಪರಪುರ, ಶಶಿಧರ ಗಟ್ಟಿ ಸೇರಿದಂತೆ ಅನೇಕ ಕಾರ್ಯಕರ್ತರು ಉಪಸ್ಥಿತರಿದ್ದರು.

## ನಿಧನ

### ಚನ್ನಮ್ಮ ಹರದಾರಿ



ಗದಗ: ಜಿಲ್ಲೆಯ ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮದ ನಿವಾಸಿ, ಶತಾಯುಸಿ, ಶ್ರೀಮತಿ ಚನ್ನಮ್ಮ ಶಿದ್ಲಿಂಗಪ್ಪ ಹರದಾರಿ (101) ಸೋಮವಾರ ಸಂಜೆ ನಿಧನರಾದರು. ಇವರ ಅಂತ್ಯಕ್ರಿಯೆ ಮಂಗಳವಾರ ಗ್ರಾಮದಲ್ಲಿ ಜರುಗಲಿದೆ. ಮೃತರಿಗೆ ಐವರು ಪುತ್ರಿಯರು, ಮೂವರು ಪುತ್ರರು, ಮೊಮ್ಮಕ್ಕಳು, ಮರಿ ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

# ಹಿರಿಯ ಕಾಂಗ್ರೆಸ್ ಮುಖಂಡ ವ್ಹಿ.ಆರ್. ಗುಡಿಸಾಗರ ನಿಧನ

■ **ವಿಜಯಸಾಕ್ಷಿ ಸುದ್ದಿ, ರೋಣ**



ಜಿಲ್ಲೆಯ ಹಿರಿಯ ಕಾಂಗ್ರೆಸ್ ಮುಖಂಡರು ಹಾಗೂ ಹಾಲುಮತ ಸಮಾಜದಲ್ಲಿ “ಹಾಲುಮತದ ಹುಲಿ” ಎಂದು ಖ್ಯಾತರಾಗಿದ್ದ ಖ್ಯಾತ ನ್ಯಾಯವಾದಿ ವ್ಹಿ.ಆರ್. ಗುಡಿಸಾಗರ ಅವರು ರವಿವಾರ ಸಂಜೆ ನಿಧನರಾಗಿದ್ದು, ರಾಜಕೀಯ ಹಾಗೂ ಸಾಮಾಜಿಕ ವಲಯದಲ್ಲಿ ಆಘಾತ ವ್ಯಕ್ತವಾಗಿದೆ.

ವ್ಹಿ.ಆರ್. ಗುಡಿಸಾಗರ ಅವರು ಪ್ರಾಮಾಣಿಕತೆ ಮತ್ತು ಪಕ್ಷನಿಷ್ಠೆಗೆ ಹೆಸರಾಗಿದ್ದ ಹಿರಿಯ ಕಾಂಗ್ರೆಸ್ ಧುರೀಣರಾಗಿದ್ದರು. ಶಾಸಕ ಜಿ.ಎಸ್. ಪಾಟೀಲ ಅವರ ಸಹೋದರರಂತೆ ಗುರುತಿಸಿಕೊಂಡಿದ್ದ ಅವರು ಅವರ ಚುನಾವಣಾ ಜಯದಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಯಾವುದೇ ಅಧಿಕಾರ ಅಥವಾ ಆಮಿಷಕ್ಕೆ ಒಳಗಾಗದೇ ಕಾಂಗ್ರೆಸ್ ಪಕ್ಷದ ಬಲವರ್ಧನೆಗೆ ತಮ್ಮ ಜೀವನವನ್ನೇ ಸಮರ್ಪಿಸಿದ್ದರು ಎಂದು ಸಹೋದ್ಯೋಗಿಗಳು ಸ್ಮರಿಸಿದ್ದಾರೆ.

ಹಾಲುಮತ ಸಮಾಜದ ಅಭಿವೃದ್ಧಿಗಾಗಿ ಅವರು ದಿನದ 24 ಗಂಟೆಗಳೂ ದುಡಿಯುತ್ತಿದ್ದವರು. ಜಾತ್ಯಾತೀತ ಮನೋಭಾವ ಹೊಂದಿದ್ದ ಅವರು ಎಲ್ಲ ಸಮಾಜಗಳವರಿಂದ ಗೌರವ ಪಡೆದಿದ್ದರು. ಅನ್ಯಾಯದ ವಿರುದ್ಧ ಸದಾ ಧ್ವನಿ ಎತ್ತುತ್ತಿದ್ದ ಕಾರಣದಿಂದ ಎಲ್ಲ ಸಮುದಾಯಗಳವರು ಅವರನ್ನು ತಮ್ಮ ಕಾರ್ಯಕ್ರಮಗಳಿಗೆ ಆಹ್ವಾನಿಸುತ್ತಿದ್ದರು.

ಮಾಜಿ ಸಂಸದ ಆರ್. ಎಸ್. ಪಾಟೀಲ ಹಾಗೂ ಶಾಸಕ ಜಿ. ಎಸ್. ಪಾಟೀಲ ಅವರಿಂದ ಅವರು ಕೆಎಸ್‌ಡಿಎಲ್ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಜೊತೆಗೆ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಮಹಾ ಪ್ರಧಾನ ಕಾರ್ಯದರ್ಶಿಯಾಗಿ, ರಾಜೀವ ಗಾಂಧಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಹಾಗೂ ನಿರ್ದೇಶಕರಾಗಿ ಸಹ ಸೇವೆ ನೀಡಿದ್ದಾರೆ. ರೋಣದಲ್ಲಿ ಕನಕ ಭವನ ನಿರ್ಮಾಣದಲ್ಲಿಯೂ ಪ್ರಮುಖ ಪಾತ್ರ ವಹಿಸಿದ್ದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತರಲ್ಲೊಬ್ಬರಾಗಿದ್ದ ಅವರು “ಹಾಲುಮತದ ಹುಲಿ” ಎಂಬ ಬಿರುದನ್ನು ಪಡೆದಿದ್ದರು. ಮೃತರ ಅಂತ್ಯಕ್ರಿಯೆ ಸೋಮವಾರ ರೋಣ ಪಟ್ಟಣದ ಸಮೀಪದ ಕೃಷ್ಣಾಪುರ ಗ್ರಾಮದ ಸ್ವಂತ ಜಮೀನಿನಲ್ಲಿ ನೆಡೆಯಿತು ಎಂದು ಸಮಾಜದ ಮುಖಂಡರು ತಿಳಿಸಿದ್ದಾರೆ.

ಕಾಗಿನಲೆ ಗುರುಪೀಠದ ಶ್ರೀಗಳು, ಧಾರವಾಡ ಮನ್ಸೂರ ಮಠದ ಶ್ರೀಗಳು, ಇಟಗಿ, ರೋಣ, ಹಾಲಕೇರಿ, ನರೆಗಲ್ಲ, ನಿಡಗುಂದಿ ಕೊಪ್ಪ ಶ್ರೀಮಠಗಳ ಶ್ರೀಗಳು, ಸಚಿವರಾದ ಎಚ್.ಕೆ. ಪಾಟೀಲ, ಮಾಜಿ ಸಂಸದ ಆರ್.ಎಸ್. ಪಾಟೀಲ, ಬಿ.ಎಸ್. ಪಾಟೀಲ, ಐ.ಎಸ್. ಪಾಟೀಲ, ಅಂದಪ್ಪ ಬಿಚ್ಚೂರ, ಎಚ್.ಎಸ್. ಸೋಂಪುರ ಸೇರಿದಂತೆ ಗದಗ ಜಿಲ್ಲೆಯ ಕಾಂಗ್ರೆಸ್ ಸಮಿತಿಯ ಪದಾಧಿಕಾರಿಗಳು, ರೋಣ, ಗಜೇಂದ್ರಗಡ ತಾಲೂಕಿನ ಹಾಲುಮತ ಸಮಾಜದ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಸಂತಾಪವನ್ನು ಸೂಚಿಸಿದ್ದಾರೆ.

> ಹಿರಿಯ ಧುರಿಣರು ನನ್ನ ಸಹೋದರರಾದ ವ್ಹಿ.ಆರ್, ಗುಡಿಸಾಗರ ನಿಧನ ನನಗೆ ತುಂಬಲಾರದಷ್ಟು ನಷ್ಟವಾಗಿದೆ. ಅವರ ಪ್ರಾಮಾಣಿಕತೆ, ಪಕ್ಷ ನಿಷ್ಠೆ, ಜಾತ್ಯಾತೀತ ಮನೋಭಾವನೆ ನಮಗೆಲ್ಲ ಮಾದರಿಯಾಗಿದೆ. ಈ ದುಃಖ ನನಗೆ ತಡೆದುಕೊಳ್ಳಲಾಗುತ್ತಿಲ್ಲ, ಕಾರಣ ಅವರು ನನ್ನ ಹಿರಿಯ ಸಹೋದರನಂತೆ ನನಗೆ ಬೆಂಬಲವಾಗಿ ನಿಂತಿದ್ದ ಮರೆಯಲಾಗದ ನಕ್ಷತ್ರ. ನಾನು ನನ್ನ ಬಲಗೈಯನ್ನು ಕಳೆದುಕೊಂಡಿದ್ದು, ನಾನು ಮಾತನಾಡುವ ಸ್ಥಿತಿಯಲ್ಲಿ ಇಲ್ಲ.
> **–ಜಿ.ಎಸ್. ಪಾಟೀಲ,** ಶಾಸಕರು, ರೋಣ.

## ಶಿರಹಟ್ಟಿ ಶಿಕ್ಷಕರ ಚುನಾವಣೆಯಲ್ಲಿ ಪರಪ್ಪ ಕರಿಗಾರ ಭರ್ಜರಿ ಜಯ

■ವಿಜಯಸಾಕ್ಷಿ ಸುದ್ದಿ, ಗದಗ




ಶಿರಹಟ್ಟಿ ತಾಲೂಕಿನ ಶಿಕ್ಷಕರ ಚುನಾವಣೆಯು ಮೇ 01, 2026 ರಂದು ನಡೆದಿದ್ದು, 2026-31ರ ಅವಧಿಗೆ ಪರಪ್ಪ ಕರಿಗಾರ ಭರ್ಜರಿ ಗೆಲುವು ಸಾಧಿಸಿದ್ದಾರೆ.

ಈ ಚುನಾವಣಾ ಫಲಿತಾಂಶದ ಹಿನ್ನೆಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್. ನಾಣಕಿ ನಾಯ್ಕ ಸೇರಿದಂತೆ ಶಿರಹಟ್ಟಿ ತಾಲೂಕಿನ ಎಲ್ಲಾ ಶಿಕ್ಷಕ ವೃಂದವು ಪರಪ್ಪ ಕರಿಗಾರರಿಗೆ ಅಭಿನಂದನೆಗಳನ್ನು ಸಲ್ಲಿಸಿದೆ.

## ಕಸಾಪ ವತಿಯಿಂದ 'ಮಹಾಪಯಣ' ಕವನ ಸಂಕಲನ ಬಿಡುಗಡೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ




ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಸಾಹಿತ್ಯ ಪರಿಷತ್ತಿನ ದಿನಾಂಕ ಮೇ 05ರಂದು ಸಂಜೆ 6.00 ಗಂಟೆಗೆ ತೆ-ಋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯದಲ್ಲಿ ಮಂಜುಳಾ ವೆಂಕಟೇಶಯ್ಯ ಅವರ 'ಮಹಾಪಯಣ' ಕವನ ಸಂಕಲನ ಲೋಕಾರ್ಪಣೆ ಸಮಾರಂಭವನ್ನು ಆಯೋಜಿಸಲಾಗಿದೆ.

ಪುಸ್ತಕ ಬಿಡುಗಡೆಯನ್ನು ಮಂಜುಳಾ ವೆಂಕಟೇಶಯ್ಯ ಅವರ ಮೊಮ್ಮಗ ಅನಿಕೇತ ನೆರವೇರಿಸಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸಲಿದ್ದಾರೆ.

ಸಾವಿತ್ರಿ ಮುಜುಮದಾರ ಅವರು ಕೃತಿಯ ಪರಿಚಯ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಹೆಸರಾಂತ ಸಾಹಿತಿಗಳು ಪ್ರೊ. ಚಂದ್ರಶೇಖರ ವಸ್ತ್ರದ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಡಿ. ವಿ. ಬಡಿಗೇರ (ಅಧ್ಯಕ್ಷರು, ಗದಗ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತು), ಡಾ. ಅರ್ಜುನ ಗೊಳಸಂಗಿ (ಅಧ್ಯಕ್ಷರು, ರಾಜ್ಯ ದಲಿತ ಸಾಹಿತ್ಯ ಪರಿಷತ್ತು) ಹಾಗೂ ವೆಂಕಟೇಶಯ್ಯ ಸಂಸ್ಕೃತಿ ಚಿಂತಕರು ಉಪಸ್ಥಿತರಿರುವರು.

ಸಾಹಿತ್ಯಾಭಿಮಾನಿಗಳು ಹಾಗೂ ಪರಿಷತ್ತಿನ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕಾರ್ಯದರ್ಶಿ ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ ಹಾಗೂ ಡಿ. ಎಸ್. ಬಾಪುರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹರ್ತಿ ಗ್ರಾಮದಲ್ಲಿ ಅಭಿವೃದ್ಧಿ ಕಾಮಗಾರಿಗಳ ಅನಾವರಣ, ಲೋಕಾರ್ಪಣೆ ನೆರವೇರಿಸಿದ ಸಚಿವ ಡಾ. ಎಚ್.ಕೆ. ಪಾಟೀಲ

# ಅಂಬೇಡ್ಕರ್ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಜಿಲ್ಲೆಯ ಹರ್ತಿ ಗ್ರಾಮದಲ್ಲಿ ಭಾನುವಾರ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆ ಕಾರ್ಯಕ್ರಮಗಳು ಜರುಗಿದವು.

ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಎಚ್.ಕೆ. ಪಾಟೀಲ, "ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಧ್ವನಿ ಇಲ್ಲದವರಿಗೆ ಧ್ವನಿಯಾಗಿ ನಿಲ್ಲುವ ಶಕ್ತಿ ನಮ್ಮ ದೇಶಕ್ಕೆ ನೀಡಿದ್ದಾರೆ. ಗೌತಮ ಬುದ್ಧ 'ಸಮ ಬಾಳು ಸಮಪಾಲು' ಎಂಬ ತತ್ವವನ್ನು ಸಾರಿದರೆ, ಬಸವಣ್ಣ 'ಇವ ನಮ್ಮವ' ಎಂಬ ಸಮಾನತೆಯ ಸಂದೇಶವನ್ನು ಸಮಾಜಕ್ಕೆ ನೀಡಿದ್ದಾರೆ. ಈ ಮಹನೀಯರ ತತ್ವಗಳು ಕೇವಲ ಭಾಷಣಗಳಲ್ಲಿ ಮಾತ್ರ ಉಳಿಯದೆ, ಪ್ರತಿಯೊಬ್ಬರ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾಗಿದೆ," ಎಂದು ಹೇಳಿದರು.

ಇಂದಿನ ಸಮಾಜದಲ್ಲಿ ಹಲವರು ಬುದ್ಧ, ಬಸವ ಹಾಗೂ ಅಂಬೇಡ್ಕರ್ ಅವರ ಹೆಸರುಗಳನ್ನು ಕೇವಲ ವೇದಿಕೆ ಭಾಷಣಗಳಿಗೆ ಮಾತ್ರ ಬಳಸುತ್ತಿರುವುದು ವಿಷಾದನೀಯ.




ಅವರ ತತ್ವ-ಸಿದ್ಧಾಂತಗಳನ್ನು ಅನುಸರಿಸಿದಾಗ ಮಾತ್ರ ಸಮಾನತೆ, ನ್ಯಾಯ ಮತ್ತು ಸಹಬಾಳ್ವೆಯ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದು ಸಚಿವರು ತಿಳಿಸಿದರು.

ಈ ಕಾಮಗಾರಿಗಳು ಪೂರ್ಣಗೊಂಡ ನಂತರ ಗ್ರಾಮದಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಬಲ ದೊರೆಯಲಿದೆ. ಗ್ರಾಮಸ್ಥರ ದೈನಂದಿನ ಜೀವನ ಸುಗಮವಾಗುವುದಲ್ಲದೆ, ಸ್ವಚ್ಛತೆ, ಸಂಚಾರ ಮತ್ತು ಸಾರ್ವಜನಿಕ ಸೇವೆಗಳ ಗುಣಮಟ್ಟ ಹೆಚ್ಚಲಿದೆ ಎಂಬ ನಿರೀಕ್ಷೆಯಿದೆ ಎಂದು ಸಚಿವರು ಅಭಿಪ್ರಾಯಪಟ್ಟರು.

**ವಿವಿಧ ಕಾಮಗಾರಿಗಳಿಗೆ ಚಾಲನೆ**

> "ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರ ಜನಪರ ಆಡಳಿತಕ್ಕೆ ಆದ್ಯತೆ ನೀಡಿ, ಪ್ರತಿಯೊಬ್ಬ ನಾಗರಿಕನಿಗೂ ನ್ಯಾಯ ಒದಗಿಸುವ ದಿಕ್ಕಿನಲ್ಲಿ ಕಾರ್ಯನಿರ್ವಹಿಸುತ್ತಿದೆ. 'ಇವ ನಮ್ಮವ, ಇವ ನಮ್ಮವ' ಎಂಬ ಸಮಾನತೆಯ ಭಾವನೆ ಮೂಡಿಸುವ ನಿಟ್ಟಿನಲ್ಲಿ ಸರ್ಕಾರದ ವಿವಿಧ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲಾಗುತ್ತಿದೆ,"
>
> – **ಎಚ್.ಕೆ. ಪಾಟೀಲ,** ಜಿಲ್ಲಾ ಉಸ್ತುವಾರಿ ಸಚಿವ

ಈ ಸಂದರ್ಭದಲ್ಲಿ ಹರ್ತಿ ಗ್ರಾಮದ ಶ್ರೀ ಬಸವೇಶ್ವರ ದೇವಸ್ಥಾನದ ಬಳಿಯಲ್ಲಿ ಸುಸಜ್ಜಿತ ಗೌರವ ಘಟಕ ಮತ್ತು ತಡೆಗೋಡೆ ನಿರ್ಮಾಣ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಲಾಯಿತು. ಶಿವ-ಪಾರ್ವತಿ ದೇವಸ್ಥಾನದ ಜೀರ್ಣೋದ್ಧಾರ ಕಾಮಗಾರಿಗೂ ಚಾಲನೆ ನೀಡಲಾಯಿತು. ಗ್ರಾಮದಲ್ಲಿ ಸಾರ್ವಜನಿಕ ಸೌಲಭ್ಯಗಳನ್ನು ವೃದ್ಧಿಸುವ ನಿಟ್ಟಿನಲ್ಲಿ ಗ್ರಾಮ ಚವಡಿ ಕಟ್ಟಡ ನಿರ್ಮಾಣ, ಸಿ.ಸಿ. ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಲಾಯಿತು.

ಗ್ರಾಮದಲ್ಲಿ ಒಂದೇ ದಿನ ಹಲವು ಕಾಮಗಾರಿಗಳಿಗೆ ಚಾಲನೆ ದೊರೆತಿರುವುದು ಗ್ರಾಮಸ್ಥರಲ್ಲಿ ಹರ್ಷದ ವಾತಾವರಣವನ್ನು ಮೂಡಿಸಿದೆ. ದೀರ್ಘಕಾಲದಿಂದ ನಿರೀಕ್ಷಿಸಲಾಗುತ್ತಿದ್ದ ರಸ್ತೆ, ಚರಂಡಿ ಮತ್ತು ಕಟ್ಟಡ ಕಾಮಗಾರಿಗಳು ಇದೀಗ ಆರಂಭವಾಗುತ್ತಿರುವುದು ಸಂತಸದ ಸಂಗತಿ ಎಂದು ಸ್ಥಳೀಯರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಎಸ್. ಎಸ್. ಪಾಟೀಲ, ಅಪ್ಪಣ್ಣ ಇನಾಮತಿ, ಬಸವರಾಜ ಕಡೇಮನಿ, ಸಿಂಗಾಡಿ, ಶರೀಫ್, ಎಸಿ ಗಂಗಪ್ಪ, ಡಾ. ಜಿನಗಾ, ನಿರ್ಮಿತಿ ಕೇಂದ್ರದ ಯೋಜನಾ ವ್ಯವಸ್ಥಾಪಕ ಗಂಗಾಧರ ಶಿರೋಳ ಸೇರಿದಂತೆ ಅನೇಕ ಗಣ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

### ಜಯಂತ್ಯುತ್ಸವಕ್ಕೆ ಚಾಲನೆ

ಬುದ್ಧ, ಬಸವ ಮತ್ತು ಅಂಬೇಡ್ಕರ್ ಜಯಂತ್ಯುತ್ಸವ ಆಚರಣೆಗೆ ಸಚಿವರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ವಿವಿಧ ಸಾಂಸ್ಕೃತಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳ ಮೂಲಕ ಮಹನೀಯರ ತತ್ವಗಳನ್ನು ಜನರಿಗೆ ಪರಿಚಯಿಸುವ ಕಾರ್ಯ ನಡೆಯಲಿದೆ ಎಂದು ತಿಳಿಸಿದರು.

### ಪುಷ್ಪಾವತಿ ಬಿ. ಬಳ್ಳಾರಿ ಅವರಿಗೆ ಪ್ರಶಸ್ತಿ | ಶಿಕ್ಷಣ, ಸಾಹಿತ್ಯ, ಸಮಾಜ ಸೇವೆಯಲ್ಲಿ ವಿಶಿಷ್ಟ ಸಾಧನೆಗೆ ಸನ್ಮಾನ

# ಕನ್ನಡ-ಶಿಕ್ಷಣ-ಸಮಾಜ ಸೇವೆಗೆ ಕದಳಿಶ್ರೀ ಗೌರವ

■ವಿಜಯಸಾಕ್ಷಿ ಸುದ್ದಿ, ಡಂಬಳ

ಚೇತನ ಫೌಂಡೇಶನ್ ಧಾರವಾಡ, ಗಂಧದ ಗುಡಿ ಕನ್ನಡ ಸಂಘ ಬೆಂಗಳೂರು, ಕರ್ನಾಟಕ ರಾಜ್ಯ ಲೇಖಕಿಯರ ಸಂಘ (ಗದಗ ಜಿಲ್ಲಾ ಘಟಕ), ಶರಣೆ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆ (ಗದಗ ಜಿಲ್ಲಾ ಘಟಕ) ಹಾಗೂ ಅಖಿಲ ಕರ್ನಾಟಕ ಸಾಹಿತ್ಯ ಸಮ್ಮೇಳನದ ಸಂಯುಕ್ತ ಆಶ್ರಯದಲ್ಲಿ ಶ್ರೀಮತಿ ಪುಷ್ಪಾವತಿ ಬಸವರಾಜ ಬಳ್ಳಾರಿ ಅವರಿಗೆ "ಕದಳಿಶ್ರೀ ಪ್ರಶಸ್ತಿ" ಪ್ರದಾನ ಮಾಡಲಾಗಿದೆ.

ಗದಗ ನಗರದ ಕೆವಿಎಸ್‌ಆರ್ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸುತ್ತಿರುವ ಅವರು, ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿದ್ದಾರೆ.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯೊಂದಿಗೆ ಅವರ ವ್ಯಕ್ತಿತ್ವ ವಿಕಾಸಕ್ಕೂ ವಿಶೇಷ ಆದ್ಯತೆ ನೀಡುತ್ತಿರುವುದು ಗಮನ



ಸೆಳೆಯುತ್ತದೆ. ಶಾಲೆಯಲ್ಲಿನ ಶಿಸ್ತಿನ ವಾತಾವರಣ ನಿರ್ಮಾಣ ಹಾಗೂ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ.

ಸಮಾಜ ಸೇವೆಯಲ್ಲಿಯೂ ಪುಷ್ಪಾವತಿ ಬಸವರಾಜ ಬಳ್ಳಾರಿ ಅವರು ತೊಡಗಿಸಿಕೊಂಡಿದ್ದು ವಿವಿಧ ಜನಪರ ಕಾರ್ಯಕ್ರಮಗಳ ಮೂಲಕ ಸಮಾಜದ ಒಳಿತಿಗಾಗಿ ಶ್ರಮಿಸುತ್ತಿದ್ದಾರೆ. ಬಡ ವಿದ್ಯಾರ್ಥಿಗಳಿಗೆ ನೆರವು, ಜಾಗೃತಿ ಕಾರ್ಯಕ್ರಮಗಳು ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಪ್ರಯತ್ನಿಸುತ್ತಿರುವುದು ಶ್ಲಾಘನೀಯವಾಗಿದೆ.

ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಉತ್ತೇಜನಕ್ಕೂ ಅವರು ನೀಡುತ್ತಿರುವ ಕೊಡುಗೆ ವಿಶೇಷವಾಗಿದೆ. ಕನ್ನಡಾಭಿಮಾನವನ್ನು ಬೆಳೆಸುವ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ಭಾಷೆಯ ಮೇಲಿನ ಗೌರವವನ್ನು ಹೆಚ್ಚಿಸುವಲ್ಲಿ ಅವರು ಮುಂಚೂಣಿಯಲ್ಲಿದ್ದಾರೆ.

ಈ ಹಿನ್ನೆಲೆಯಲ್ಲಿ ಅವರ ಅನುಪಮ ಸೇವೆಯನ್ನು ಗುರುತಿಸಿ ಪುಷ್ಪಾವತಿ ಬಸವರಾಜ ಬಳ್ಳಾರಿ ಅವರಿಗೆ "ಕದಳಿಶ್ರೀ ಪ್ರಶಸ್ತಿ" ಪ್ರದಾನ ಮಾಡಿರುವುದು ಸೂಕ್ತ ಗೌರವವಾಗಿದೆ. ಈ ಪ್ರಶಸ್ತಿ ಅವರ ಮುಂದಿನ ಕಾರ್ಯಗಳಿಗೆ ಮತ್ತಷ್ಟು ಪ್ರೇರಣೆಯಾಗಲಿ ಎಂದು ಅಭಿಮಾನಿಗಳು ಹಾಗೂ ಮಹಿಳಾ ಸಂಘಟನೆಗಳು ಮತ್ತು ವಿವಿಧ ಸಂಘಟನೆಗಳು ಅಭಿನಂದನೆಗಳನ್ನು ಸಲ್ಲಿಸಿವೆ.

ಕಾರ್ಯಕ್ರಮದಲ್ಲಿ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಶಿಕ್ಷಕರು, ಸಾಹಿತ್ಯಾಸಕ್ತರು ಹಾಗೂ ಸಾರ್ವಜನಿಕರು ಭಾಗವಹಿಸಿ, ಪ್ರಶಸ್ತಿ ಪುರಸ್ಕೃತರನ್ನು ಅಭಿನಂದಿಸಿದರು.

# ರಾಮಗೇರಿಯಲ್ಲಿ 20 ಲಕ್ಷ ರೂ. ವೆಚ್ಚದ ಸಿ.ಸಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ವ್ಯಾಪ್ತಿಯ ರಾಮಗೇರಿ ಗ್ರಾಮದಲ್ಲಿ ಸುಮಾರು 20 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ಸಿ.ಸಿ ರಸ್ತೆ ಕಾಮಗಾರಿಗೆ ಶಾಸಕ ಡಾ. ಚಂದ್ರು ಲಮಾಣಿ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗಗಳಲ್ಲಿ ಉತ್ತಮ ರಸ್ತೆ ವ್ಯವಸ್ಥೆ ಅಗತ್ಯವಾಗಿದ್ದು, ರಸ್ತೆಗಳ ಸುಧಾರಣೆಯಿಂದ ವಾಹನ ಸಂಚಾರ ಸುಲಭವಾಗುವ ಜೊತೆಗೆ ಗ್ರಾಮಗಳ ಅಭಿವೃದ್ಧಿಗೂ ಸಹಕಾರಿ ಆಗುತ್ತದೆ ಎಂದು ಹೇಳಿದರು.

ರಾಮಗೇರಿ ಗ್ರಾಮದಲ್ಲಿ ಬಹುಕಾಲದಿಂದ ರಸ್ತೆ ಅಭಿವೃದ್ಧಿಗೆ ಬೇಡಿಕೆ ಇದ್ದು, ಅದನ್ನು ಗಮನದಲ್ಲಿಟ್ಟುಕೊಂಡು ಈ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದರು. ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ರಸ್ತೆ




ಅಭಿವೃದ್ಧಿಗೆ ಬೇಡಿಕೆಗಳಿದ್ದು, ಸರ್ಕಾರದ ಅನುದಾನಕ್ಕೆ ಅನುಗುಣವಾಗಿ ಹಂತ ಹಂತವಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ತಿಳಿಸಿದರು. ಜೊತೆಗೆ, ಗುಣಮಟ್ಟದ ಕಾಮಗಾರಿಗೆ ಸಂಬಂಧಿಸಿದ ಅಧಿಕಾರಿಗಳು ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂದು ಸೂಚಿಸಿದರು.

ಈ ವೇಳೆ ಬಸಪ್ಪ ಸಿಂಗಣ್ಣವರ, ಸಿದ್ದಪ್ಪ ಕಾಳೆ, ಸೋಮಲಿಂಗಪ್ಪ ಬೇವಿನಮರದ, ಚನ್ನಬಸಪ್ಪ ಬಡೆಸುರ, ರಾಜು ಬೆಟಗೇರಿ, ಶಿವಾನಂದ ಕಡೆಮನಿ, ಅಶೋಕ್ ಹುಣಸಿಮರದ, ಸಿಡಿಪಿಓ ಮೃತ್ಯುಂಜಯ ಜಿ., ಪ್ರದೀಪ್ ಪಾಟೀಲ, ಶ್ರೀನಾಥ್ ಗೊಂದಿ, ಕೋಟೆಪ್ಪ ಬೆಟಗೇರಿ, ಸುನಿಲ್ ಸಂಗಮನವರ, ಚಂದ್ರು ಬಸಪ್ಪನವರ, ವಿಜಯ ಬೂದಿಹಾಳ, ಗಂಗಾಧರ ಮೆಣಸಿನಕಾಯಿ, ಮುತ್ತು ಯಂಗಾಡಿ, ಬೀರಪ್ಪ ಕೆರೂರ, ಅಕ್ಷಯ್ ಕುಮಸಿ, ಭೀಮಣ್ಣ ಯಂಗಾಡಿ ಸೇರಿದಂತೆ ಗ್ರಾಮಸ್ಥರು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

### ಮುಂದಿನ ಪೀಳಿಗೆಗೆ ಕನ್ನಡ ಉಳಿಸುವ ಜವಾಬ್ದಾರಿ ನಮ್ಮದೇ : ಡಾ. ಪಿ.ಡಿ. ತೋಟದ

# ಕನ್ನಡ ಕೇವಲ ಭಾಷೆಯಲ್ಲ, ಅದು ಅಸ್ಮಿತೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ಭಾಷೆ, ನೆಲ, ಜಲ ಪ್ರತಿಯೊಂದಕ್ಕೂ ತನ್ನದೇ ಆದ ಶ್ರೇಷ್ಠತೆ ಇದ್ದು, ಕನ್ನಡ ಕೇವಲ ಒಂದು ಭಾಷೆಯಲ್ಲ, ಅದು ನಮ್ಮ ಅಸ್ಮಿತೆಯ ಪ್ರತೀಕವಾಗಿದೆ ಎಂದು ಹಿರಿಯ ವೈದ್ಯ ಡಾ. ಪಿ.ಡಿ. ತೋಟದ ಅಭಿಪ್ರಾಯಪಟ್ಟರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ರವಿವಾರ ಪಟ್ಟಣದ ದಿ ಯೂನಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಹಮ್ಮಿಕೊಂಡಿದ್ದ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎರಡು ಸಾವಿರ ವರ್ಷಗಳ ಭವ್ಯ ಇತಿಹಾಸ ಹೊಂದಿರುವ ಕನ್ನಡದ ಹಿರಿಮೆಯನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗರ ಕರ್ತವ್ಯವಾಗಿದ್ದು, ಕನ್ನಡದ ಬಗ್ಗೆ ಮಾತಿನಲ್ಲಷ್ಟೇ ಅಲ್ಲ, ಆಚರಣೆಯಲ್ಲಿಯೂ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.




ಆಧ್ಯಾತ್ಮಜೀವಿ ಶಿವಣ್ಣ ಕೋಳಿವಾಡ ನೀಡಿದ ದತ್ತಿ ಉಪನ್ಯಾಸದಲ್ಲಿ "ಕನ್ನಡ ಭಾಷೆ-ಕನ್ನಡಿಗರ ಅಸ್ಮಿತೆ" ವಿಷಯ ಕುರಿತು ಉಪನ್ಯಾಸಕ ರವಿ ನೀರಲಗಿ ಮಾತನಾಡಿ, ಕನ್ನಡವು ಕೇವಲ ಸಂವಹನದ ಮಾಧ್ಯಮವಲ್ಲ, ಅದು ನಮ್ಮ ಸಂಸ್ಕೃತಿ, ಇತಿಹಾಸ ಮತ್ತು ಅಸ್ಮಿತೆಯ ತಳಹದಿಯಾಗಿದೆ. ಕನ್ನಡ ಭಾಷೆ ಕನ್ನಡಿಗರನ್ನು ಭಾವನಾತ್ಮಕವಾಗಿ ಒಂದಾಗಿಸುವ ಶಕ್ತಿಯಾಗಿದೆ ಎಂದರು.

ಡಾ. ಪಿ.ಡಿ. ತೋಟದ ನೀಡಿದ "ಜಾನಪದ-ಜಾಣರ ಪದ" ವಿಷಯದ ದತ್ತಿ ಉಪನ್ಯಾಸದಲ್ಲಿ ಶಿಕ್ಷಕ-ಸಾಹಿತಿ ಆರ್.ಎಸ್. ಪಾಟೀಲ ಮಾತನಾಡಿ, ಜಾನಪದ ಸಾಹಿತ್ಯವು ನಮ್ಮ ಆಚಾರ-ವಿಚಾರ, ಹಬ್ಬ-ಹರಿದಿನಗಳು ಹಾಗೂ ಮಾನವೀಯ ಸಂಬಂಧಗಳ ಮೌಲ್ಯವನ್ನು ಬೋಧಿಸುತ್ತದೆ. ಮೌಖಿಕ ಪರಂಪರೆಯಾದ ಜಾನಪದ ಸಾಹಿತ್ಯ ಸಮಾಜವನ್ನು ಮುನ್ನಡೆಸುವ ಮಾರ್ಗವಾಗಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಯೂನಿಕ್ ಶಾಲೆಯ ಮುಖ್ಯೋಪಾಧ್ಯಾಯ ಅರವಿಂದ ದೇಶಪಾಂಡೆ, ವ್ಯವಹಾರಿಕ ಭಾಷೆಯಾಗಿ ಆಂಗ್ಲ ಬಳಸಿದರೂ ಅಂತರಂಗದ ಭಾಷೆಯಾಗಿ ಕನ್ನಡ ಅವಶ್ಯಕ ಎಂದರು. ಇನ್ನೋರ್ವ ಮುಖ್ಯ ಅತಿಥಿ ಕು. ಚೇತನಾ ಕೋಳಿವಾಡ ಕನ್ನಡ ನಮ್ಮ ಅಸ್ತಿತ್ವವನ್ನು ಪ್ರತಿನಿಧಿಸುತ್ತದೆ ಎಂದು ಹೇಳಿದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಈಶ್ವರ ಮೇಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ಘಟಕದ ಕಾರ್ಯಚಟುವಟಿಕೆಗಳು ಹಾಗೂ ಮುಂದಿನ ಯೋಜನೆಗಳನ್ನು ವಿವರಿಸಿದರು. ಸಾಹಿತಿ ಸುರೇಶ್ ತಂಗೋಡ ಜನಪದ ಸಾಹಿತ್ಯದ ಕುರಿತು ಅಭಿಪ್ರಾಯ ವ್ಯಕ್ತಪಡಿಸಿದರು.

> "ಎರಡು ಸಾವಿರ ವರ್ಷಗಳ ಇತಿಹಾಸ ಹೊಂದಿರುವ ಕನ್ನಡದ ಹಿರಿಮೆಯನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸಬೇಕು"
>
> – **ಡಾ. ಪಿ.ಡಿ. ತೋಟದ,** ವೈದ್ಯರು.

ಕಾರ್ಯಕ್ರಮದಲ್ಲಿ ದತ್ತಿ ದಾನಿಗಳು ಹಾಗೂ ಉಪನ್ಯಾಸಕರನ್ನು ಸನ್ಮಾನಿಸಲಾಯಿತು. ಕ.ಸಾ.ಪ ಸಂಘಟನಾ ಕಾರ್ಯದರ್ಶಿ ನಾಗರಾಜ ಮಜ್ಜಿಗುಡ್ಡ ಸ್ವಾಗತಿಸಿದರು. ಈರಣ್ಣ ಗಾಣಿಗೇರ ಕಾರ್ಯಕ್ರಮ ನಿರೂಪಿಸಿದರು. ಗೌರವ ಕಾರ್ಯದರ್ಶಿ ವೀರಣ್ಣ ಅಕ್ಕೂರ ವಂದಿಸಿದರು. ಎಸ್.ಬಿ. ಅಣ್ಣಿಗೇರಿ, ಶಶಿಕಾಂತ ಕುಂಬಾರ, ಸಿ.ಎಫ್. ಪಾಟೀಲ, ಎಲ್. ಆರ್. ಮಲಸಮುದ್ರ, ಪ್ರವೀಣ ಕುಂಬಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ತೋಂಟದಾರ್ಯ ಮಠದ ಜಾತ್ರೆಯಲ್ಲಿ ಭೀಕರ ದುರಂತ!

▸▸ಮೊದಲನೇ ಪುಟದಿಂದ

ಈ ಅವಘಡದಲ್ಲಿ ಮಕ್ಕಳು, ಮಹಿಳೆಯರು ಹಾಗೂ ಪುರುಷರು ಸೇರಿ ಹಲವರಿಗೆ ತಲೆ, ಹೊಟ್ಟೆ, ಕೈ ಹಾಗೂ ಕಾಲುಗಳಿಗೆ ಗಾಯಗಳಾಗಿವೆ. ಕೆಲವರು ತೀವ್ರ ನೋವಿನಿಂದ ನರಳಾಡುತ್ತಿರುವ ದೃಶ್ಯಗಳು ಮನಕಲಕುವಂತಿತ್ತು.

ಘಟನೆಯ ಬಳಿಕ ಜಾತ್ರಾ ಮಂಡಳಿ ಹಾಗೂ ಡ್ಯಾನ್ಸಿಂಗ್ ಫ್ಲೋರ್ ಗೇಮ್ ಮಾಲಿಕರ ನಿರ್ಲಕ್ಷ್ಯವೇ ದುರಂತಕ್ಕೆ ಕಾರಣ ಎಂಬ ಆರೋಪಗಳು ಕೇಳಿ ಬಂದಿವೆ. ಯಂತ್ರಚಾಲಿತ ಆಟಿಕೆಗಳಿಗೆ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳದಿರುವುದು ದೊಡ್ಡ ಪ್ರಶ್ನೆ ಎಬ್ಬಿಸಿದೆ.


ಘಟನಾ ಸ್ಥಳಕ್ಕೆ ಆಗಮಿಸಿದ ಗದಗ ಶಹರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ಜಾತ್ರಾ ಕಮಿಟಿ, ಜಾಗೆ ಟೆಂಡರ್ ಹಾಕಿದವರ ಹಾಗೂ ಡ್ಯಾನ್ಸಿಂಗ್ ಫ್ಲೋರ್ ಗೇಮ್ ಮಾಲಿಕರ ವಿರುದ್ಧ ಪ್ರಕರಣ ದಾಖಲಾಗಿದೆ.

ಈ ಘಟನೆಯ ಹಿನ್ನೆಲೆಯಲ್ಲಿ ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ ವತಿಯಿಂದ ತಕ್ಷಣ ಪ್ರತಿಭಟನೆ ನಡೆಸಲಾಯಿತು. ಜಾತ್ರೆಯಲ್ಲಿ ಅಸುರಕ್ಷಿತ ಆಟಿಕೆಗಳನ್ನು ನಿಲ್ಲಿಸಿ ಜಾತ್ರೆಯನ್ನು ಬಂದ್ ಮಾಡಿಸುವಂತೆ ಆಗ್ರಹಿಸಿದರು. ಜಾತ್ರಾ ಆಡಳಿತ ಮಂಡಳಿಯ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಒಟ್ಟಾರೆ, ಖುಷಿಯಿಂದ ಜಾತ್ರೆಗೆ ಬಂದ ಭಕ್ತರು ಆಸ್ಪತ್ರೆಗೆ ಸೇರಬೇಕಾದ ದುಃಖದ ಪರಿಸ್ಥಿತಿ ನಿರ್ಮಾಣವಾಗಿದ್ದು, ಮುಂದಿನ ದಿನಗಳಲ್ಲಿ ಇಂತಹ ಅವಘಡಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕೆಂಬ ಒತ್ತಾಯ ಕೇಳಿ ಬರುತ್ತಿದೆ.

## ನಿಧನ

### ಬಸಪ್ಪ ಮಜ್ಜಿಗುಡ್ಡ



ಲಕ್ಷ್ಮೇಶ್ವರ: ಪಟ್ಟಣದ ಹಳ್ಳದಕೇರಿ ಓಣಿಯ ನಿವಾಸಿ, ಗಾಣಿಗೇರ ಸಮಾಜದ ಹಿರಿಯ ಮುಖಂಡ ಬಸಪ್ಪ ಶಿವಪ್ಪ ಮಜ್ಜಿಗುಡ್ಡ. (62) ಮೇ.3ರಂದು ರವಿವಾರ ನಿಧನರಾಗಿದ್ದಾರೆ. ಮೃತರಿಗೆ ಪತ್ನಿ, ಮೂವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವಿದೆ.

## ನಿಧನ

### ಶಾಂತಾಬಾಯಿ ಗ್ರಾಮಪುರೋಹಿತ



ನರೇಗಲ್ಲ: ಮೂಲತಃ ನರೇಗಲ್ಲ ಪಟ್ಟಣದ, ಸದ್ಯಕ್ಕೆ ರಾಜೂರು ಗ್ರಾಮದ ನಿವಾಸಿಯಾಗಿದ್ದ ಶಾಂತಾಬಾಯಿ ಮಹಾದೇವಭಟ್ಟ ಗ್ರಾಮಪುರೋಹಿತ(84) ಅವರು ಮೇ 1ರಂದು ನಿಧನರಾದರು. ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

# ಇಂದು ಕಸಾಪ ಸಂಸ್ಥಾಪನಾ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನದ ಅಂಗವಾಗಿ ಉಪನ್ಯಾಸ ಹಾಗೂ ಸನ್ಮಾನ ಕಾರ್ಯಕ್ರಮವನ್ನು ದಿನಾಂಕ 05–05–2026 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಡಿ.ಜಿ.ಎಂ. ಆಯುರ್ವೇದ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸಲಿದ್ದು, ಸಾಹಿತ್ಯ ಮತ್ತು ಸಂಸ್ಕೃತಿ ಸಂವರ್ಧನೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಪಾತ್ರ ಕುರಿತು ಲಕ್ಷ್ಮೇಶ್ವರದ ನ್ಯಾಯವಾದಿಗಳಾದ ಬಸವರಾಜ ಬಾಳೇಶ್ವರಮಠ ಉಪನ್ಯಾಸ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಕಾಯಕಯೋಗಿ ಪ್ರಶಸ್ತಿ ಪುರಸ್ಕೃತ ಎಸ್. ಎಸ್. ಪಟ್ಟಣಶೆಟ್ಟರ, ಜ. ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿಗಳು ಹಾಗೂ ಸರಕಾರಿ ಪ್ರೌಢಶಾಲೆಯ ಅಭಿವೃದ್ಧಿಗೆ ಶ್ರಮಿಸಿದ ಶಿಕ್ಷಣ ಚಿಂತಕರಾದ ಡಾ. ಬಸವರಾಜ ಧಾರವಾಡ ಅವರನ್ನು ಸನ್ಮಾನಿಸಲಾಗುವುದು. ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು ಹಾಗೂ ಪರಿಷತ್ತಿನ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕಾರ್ಯದರ್ಶಿ ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ ಹಾಗೂ ಡಿ. ಎಸ್. ಬಾಪುರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪುರಸಭೆ ನೂತನ ಅಧ್ಯಕ್ಷೆಯಾಗಿ ರೇಷ್ಮಾ ಸಿಕಂದರ್ ಅಧಿಕಾರ ಸ್ವೀಕಾರ

▶▶ ಮೊದಲನೇ ಪುಟದಿಂದ

ಈ ಸಂದರ್ಭದಲ್ಲಿ ಉಪಾಧ್ಯಕ್ಷೆ ನೇತ್ರಾವತಿ ಹುಚ್ಚಪ್ಪ ಸೆರಗಾರ್, ಪುರಸಭಾ ಸದಸ್ಯ ಪವಾಡಿ ಹನುಮಂತಪ್ಪ, ನಿಕಟಪೂರ್ವ ಅಧ್ಯಕ್ಷ ಎಂ. ಮರಿರಾಮಪ್ಪ, ಗುಂಡ್ರು ಹನುಮಂತಪ್ಪ, ಕಲಂದರ್ ಸಾಬ್, ಮಾಜಿ ಅಧ್ಯಕ್ಷೆ ಕವಿತಾ ಹಾಲ್ದಾಳ್, ನಿಕಟಪೂರ್ವ ಉಪಾಧ್ಯಕ್ಷೆ ಅಂಬಿಕಾ ದೇವೇಂದ್ರಪ್ಪ, ಮೂಸಾ, ತ್ಯಾವಣಗಿ ಕೊಟ್ರೇಶ್, ರಾಘವೇಂದ್ರ, ನಾಗಭೂಷಣ, ನಾಗವೇಣಿ, ಬಾರಿಕರ ಬಾಪೂಜಿ, ಕಾರ್ತಿಕ್, ಉಮಾಪತಿ, ಮಡಿವಾಳರ ಪ್ರಕಾಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಮುಳಗುಂದದಲ್ಲಿ ರೂ 16.71 ಕೋಟಿ ವೆಚ್ಚದ ಕೆಇಬಿ ಗ್ರಿಡ್‌ಗೆ ಸಚಿವ ಪಾಟೀಲ ಚಾಲನೆ-ರೈತರು ಹಾಗೂ ಕೈಗಾರಿಕೆಗಳಿಗೆ ಲಾಭ ನಿರೀಕ್ಷೆ**

# ವಿದ್ಯುತ್ ಸಮಸ್ಯೆಗೆ ಶಾಶ್ವತ ಪರಿಹಾರ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ತಾಲೂಕಿನ ಮುಳಗುಂದ ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭಾನುವಾರ ಚಾಲನೆ ನೀಡಲಾಗಿದ್ದು, ಪ್ರಮುಖವಾಗಿ ರೂ. 16.71 ಕೋಟಿ ವೆಚ್ಚದ ಕೆಇಬಿ ಗ್ರಿಡ್ ನಿರ್ಮಾಣ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಲಾಯಿತು.

ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್. ಕೆ. ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮುಳಗುಂದದಲ್ಲಿ ನಿರ್ಮಿಸಲಾಗುವ 2 ಫಿ 20 ಎಂ.ವಿ.ಎ ಸಾಮರ್ಥ್ಯದ 110/11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರವು ಈ ಪ್ರದೇಶದ ವಿದ್ಯುತ್ ಸರಬರಾಜು ವ್ಯವಸ್ಥೆಗೆ ಮಹತ್ವದ ಬಲ ತುಂಬಲಿದೆ. ವಿಶೇಷವಾಗಿ ರೈತರಿಗೆ ನಿರಂತರ ಮತ್ತು ಗುಣಮಟ್ಟದ ವಿದ್ಯುತ್ ಲಭ್ಯವಾಗುವ ಮೂಲಕ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ದೊರೆಯಲಿದೆ. ಈ ಗ್ರಿಡ್ ಕಾಮಗಾರಿ ಒಂದು ವರ್ಷದೊಳಗೆ ಪೂರ್ಣಗೊಳ್ಳುವ ವಿಶ್ವಾಸವಿದ್ದು, ಮುಂದಿನ ವರ್ಷದ ಮೇ 1ರೊಳಗೆ ಲೋಕಾರ್ಪಣೆ ಮಾಡುವ ಗುರಿ ಹೊಂದಲಾಗಿದೆ ಎಂದು ಸಚಿವರು ತಿಳಿಸಿದರು.

ಮುಳಗುಂದದ ಜನರು ಜಾಣರು ಮತ್ತು ದೊಡ್ಡ ಮೊತ್ತದ ಯೋಜನೆಗಳನ್ನು ಒಟ್ಟಾಗಿ ಸಾಧಿಸುವ ಸಾಮರ್ಥ್ಯ ಹೊಂದಿದ್ದಾರೆ. ಇದೇ ಕಾರಣಕ್ಕೆ "ವಿಜ್ ಟು ವ್ಯಾಲಿ" ಯೋಜನೆಯಂತಹ ರೂ. 20 ಕೋಟಿ ಯೋಜನೆಯೂ ಯಶಸ್ವಿಯಾಗಿ ಅನುಷ್ಠಾನಗೊಂಡಿದೆ ಎಂದು ಸಚಿವ ಎಚ್.ಕೆ. ಪಾಟೀಲ ಪ್ರಶಂಸಿಸಿದರು.

ಕಾರ್ಯಕ್ರಮದಲ್ಲಿ ಹು.ವಿ.ಸ.ಕಂ.ನಿ ಅಧ್ಯಕ್ಷರು ಹಾಗೂ ಶಿಗ್ಗಾಂವ–ಸವಣೂರ ಮಾಜಿ ಶಾಸಕ ಸೈಯದ್ ಅಜಂಪೀರ್ ಎಸ್. ಖಾದ್ರಿ, ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ ಸೇರಿದಂತೆ ಹಲವು ಗಣ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಮುಳಗುಂದದಲ್ಲಿ ಜೈನ ಬಸದಿ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಯಿತು. ಮುಳಗುಂದ ಪಟ್ಟಣದ ಅಂಗನವಾಡಿ ಕೇಂದ್ರ–323 ಕಟ್ಟಡ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಯಿತು. ಅಲ್ಲದೇ ಶ್ರೀ ಪುರದ ಬಸವೇಶ್ವರ ಸಮುದಾಯ ಭವನ ನಿರ್ಮಾಣಕ್ಕೂ ಶಂಕುಸ್ಥಾಪನೆ ನೆರವೇರಿಸಲಾಯಿತು. ಈ ಕಾಮಗಾರಿಗಳು ಪೂರ್ಣಗೊಂಡ ಬಳಿಕ ಸಾಮಾಜಿಕ ಹಾಗೂ ಶೈಕ್ಷಣಿಕ ಸೌಲಭ್ಯಗಳು ಮತ್ತಷ್ಟು ಸುಧಾರಿಸಲಿವೆ ಎಂದು ಸಚಿವರು ತಿಳಿಸಿದರು.



"ಮುಳಗುಂದದಲ್ಲಿ ಕೆಇಬಿ ಗ್ರಿಡ್ ಸ್ಥಾಪನೆ ಎಂಬುದು ಕಳೆದ ಇಪ್ಪತ್ತು ವರ್ಷಗಳ ಹೋರಾಟದ ಫಲವಾಗಿದೆ. ಇಂದು ಅದು ಸಾಕಾರವಾಗುತ್ತಿರುವುದು ಅತ್ಯಂತ ಸಂತಸದ ಸಂಗತಿ. ರೂ. 16.71 ಕೋಟಿ ಮೊತ್ತದ ಈ ಯೋಜನೆ ಈ ಭಾಗದ ರೈತರು ಹಾಗೂ ಸಾರ್ವಜನಿಕರಿಗೆ ಬಹಳ ಉಪಯುಕ್ತವಾಗಲಿದೆ,"

– ಸಚಿವ ಡಾ. ಎಚ್.ಕೆ. ಪಾಟೀಲ

**ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಗದಗ ಸಮಾಜ ಕಲ್ಯಾಣ ವಸತಿ ಶಾಲೆಗಳ ಸಾಧನೆ**

# ಸುಷ್ಮಾ ಜಿಲ್ಲೆಗೆ 3ನೇ ಸ್ಥಾನ– 99.86% ದಾಖಲೆಯ ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳು ಹಾಗೂ ವಸತಿ ಶಾಲೆಗಳ ವಿದ್ಯಾರ್ಥಿಗಳು 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗಮನಾರ್ಹ ಸಾಧನೆ ಮಾಡಿ, ಜಿಲ್ಲೆಯ ಶಿಕ್ಷಣ ಕ್ಷೇತ್ರದಲ್ಲಿ ಮತ್ತೊಮ್ಮೆ ತಮ್ಮ ಸಾಮರ್ಥ್ಯವನ್ನು ತೋರಿಸಿದ್ದಾರೆ.

ಜಿಲ್ಲೆಯ ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಂದ ಒಟ್ಟು 408 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 387 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಇದರೊಂದಿಗೆ ಶೇ. 94.85 ಫಲಿತಾಂಶ ದಾಖಲಾಗಿದೆ.

ಇವರಲ್ಲಿ 16 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್‌ನಲ್ಲಿ ಉತ್ತೀರ್ಣರಾಗಿದ್ದು, 203 ವಿದ್ಯಾರ್ಥಿಗಳು ಪ್ರಥಮ ದರ್ಜೆ, 108 ವಿದ್ಯಾರ್ಥಿಗಳು ದ್ವಿತೀಯ ದರ್ಜೆ ಹಾಗೂ 60 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.

ಪರಿಶಿಷ್ಟ ಪಂಗಡದ ನಿಲಯಗಳಲ್ಲಿ 24 ವಿದ್ಯಾರ್ಥಿಗಳಲ್ಲಿ 23 ಮಂದಿ ಉತ್ತೀರ್ಣರಾಗಿದ್ದು, ಶೇ. 95.83 ಫಲಿತಾಂಶ ದಾಖಲಾಗಿದೆ.

ಇನ್ನೂ, ಇಲಾಖೆಯ ಅಧೀನದಲ್ಲಿರುವ 13 ವಸತಿ ಶಾಲೆಗಳ 539 ವಿದ್ಯಾರ್ಥಿಗಳಲ್ಲಿ 206 ಮಂದಿ ಡಿಸ್ಟಿಂಕ್ಷನ್ ಹಾಗೂ 284 ಮಂದಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. 12 ವಸತಿ ಶಾಲೆಗಳು ಶೇ.100 ಫಲಿತಾಂಶ ದಾಖಲಿಸಿದ್ದು, ಒಟ್ಟಾರೆ ಶೇ. 99.86 ಫಲಿತಾಂಶ ದಾಖಲಾಗಿದೆ. ಸಾಧನೆಗೈದ ವಿದ್ಯಾರ್ಥಿನಿಯನ್ನು ಕಚೇರಿಯಲ್ಲಿ ಸನ್ಮಾನಿಸಿ ಅಭಿನಂದಿಸಲಾಯಿತು.

ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಯ ವಿದ್ಯಾರ್ಥಿನಿ ಕುಮಾರಿ ಸುಷ್ಮಾ ತಾವರೇಪ್ಪ ನಾಯಕ ಅವರು 625ಕ್ಕೆ 620 ಅಂಕ (ಶೇ. 99.20) ಪಡೆದು ಜಿಲ್ಲೆಯಲ್ಲಿ ತೃತೀಯ ಸ್ಥಾನ ಗಳಿಸಿದ್ದಾರೆ.



"ವಿದ್ಯಾರ್ಥಿಗಳ ಈ ಸಾಧನೆ ಶ್ಲಾಘನೀಯ. ಎಲ್ಲ ವಸತಿ ನಿಲಯ ಮತ್ತು ವಸತಿ ಶಾಲೆಗಳಲ್ಲೂ ಇಂತಹ ಉತ್ತಮ ಫಲಿತಾಂಶಗಳು ಮುಂದುವರಿಯಬೇಕು,"

– ಡಾ. ನಂದಾ ಹಣಬರಟ್ಟಿ,
ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ

**ರೂ.25 ಲಕ್ಷ ವೆಚ್ಚದ ಕಾಮಗಾರಿಗೆ ಶಾಸಕ ಡಾ. ಚಂದ್ರು ಲಮಾಣಿ ಭೂಮಿ ಪೂಜೆ – ಮಳೆಗಾಲದ ಸಂಚಾರ ಸಮಸ್ಯೆಗೆ ಶಾಶ್ವತ ಪರಿಹಾರ**

# ದೊಡ್ಡೂರು–ಶಿಗ್ಲಿ ರಸ್ತೆಗೆ ಕಿರು ಸೇತುವೆ ನಿರ್ಮಾಣಕ್ಕೆ ಚಾಲನೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ದೊಡ್ಡೂರು–ಶಿಗ್ಲಿ ರಸ್ತೆ ಮಾರ್ಗದಲ್ಲಿ ರೂ. 25 ಲಕ್ಷ ವೆಚ್ಚದಲ್ಲಿ ಕಿರು ಸೇತುವೆ ನಿರ್ಮಾಣ ಕಾಮಗಾರಿಗೆ ಶಾಸಕ ಡಾ. ಚಂದ್ರು ಲಮಾಣಿ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಳೆಗಾಲದಲ್ಲಿ ಈ ಮಾರ್ಗದಲ್ಲಿ ರಸ್ತೆ ಮೇಲೆಯೇ ಅಪಾರ ಪ್ರಮಾಣದ ನೀರು ಹರಿದು ಸಂಚಾರಕ್ಕೆ ತೊಂದರೆ ಉಂಟಾಗುತ್ತಿತ್ತು. ಈ ಸಮಸ್ಯೆಗೆ ಪರಿಹಾರವಾಗಿ ಕಿರು ಸೇತುವೆ ನಿರ್ಮಾಣ ಮಾಡಬೇಕೆಂಬುದು ಸ್ಥಳೀಯರ ಬಹುದಿನಗಳ ಬೇಡಿಕೆಯಾಗಿತ್ತು ಎಂದು ತಿಳಿಸಿದರು.

ಸರ್ಕಾರದಿಂದ ಅನುದಾನ ತರಿಸುವ ಮೂಲಕ ಜನರ ಬೇಡಿಕೆಯನ್ನು ಈಡೇರಿಸಲಾಗುತ್ತಿದೆ. ಕ್ಷೇತ್ರದಲ್ಲಿ ಇನ್ನೂ ರಸ್ತೆ ಹಾಗೂ ಸೇತುವೆಗಳಂತಹ ಮೂಲಭೂತ ಸೌಕರ್ಯಗಳ ಅಗತ್ಯವಿದ್ದು, ಅವುಗಳ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮುಂದುವರಿಯಲಿದೆ ಎಂದು ಹೇಳಿದರು.

ಗುತ್ತಿಗೆದಾರರು ನಿಗದಿತ ಅವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ ಸಾರ್ವಜನಿಕರಿಗೆ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸಬೇಕು ಎಂದು ಸೂಚಿಸಿದರು.

ಈ ವೇಳೆ ಗ್ರಾಪಂ ಮಾಜಿ ಅಧ್ಯಕ್ಷ ಚಂದ್ರಶೇಖರ ಈಳಿಗೇರ, ಟೋಪಣ್ಣ ಲಮಾಣಿ, ಗುಡ್ಡಪ್ಪ ಹಡಪದ, ಗುಡ್ಡಪ್ಪ ಮತ್ತೂರ, ತುಕಪ್ಪ ಪೂಜಾರ, ಗುರುರಾಜ ಬಾಗಲದ, ಮಂಜು ಡೊಳ್ಳಿನ, ಗಂಗಾಧರ ಮೆಣಸಿನಕಾಯಿ, ನಿಂಗಪ್ಪ ಬಂಕಾಪುರ, ರವಿ ಭಜಕ್ಕನವರ, ಯಲ್ಲಪ್ಪಗೌಡ ಪಾಟೀಲ, ಸಂತೋಷ ಬಾಗಲದ, ಡಿ. ವೈ. ಹುನಗುಂದ, ಅಶೋಕ ಶಿರಹಟ್ಟಿ, ಸಂಜೀವ ದೇಸಾಯಿ, ರವಿಗೌಡ ಪಾಟೀಲ, ಮನೋಜ ರಗಟಿ ಸೇರಿದಂತೆ ಅನೇಕ ಮುಖಂಡರು, ಹಿರಿಯರು ಹಾಗೂ ಯುವಕರು ಉಪಸ್ಥಿತರಿದ್ದರು.



"ಜನರ ಬಹುಕಾಲದ ಬೇಡಿಕೆಗೆ ಸ್ಪಂದಿಸಿ ಕಿರು ಸೇತುವೆ ನಿರ್ಮಾಣ ಕೈಗೊಳ್ಳಲಾಗಿದೆ. ಈ ಕಾಮಗಾರಿ ಶೀಘ್ರ ಪೂರ್ಣಗೊಂಡರೆ ಸಂಚಾರ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗಲಿದೆ,"

– ಡಾ. ಚಂದ್ರು ಲಮಾಣಿ, ಶಾಸಕ

# ಎಸ್.ಕೆ. ಪಾಟೀಲ ಪ್ಯಾನೆಲ್ ಭರ್ಜರಿ ಗೆಲುವು

■ ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ತಾಲೂಕಿನ ಪ್ರಾಥಮಿಕ ಶಾಲಾ ಶಿಕ್ಷಕರ ಚುನಾವಣೆ 2026–31ರ ಅವಧಿಗೆ ಮೇ 1ರಂದು ಜರುಗಿದ್ದು, ಇದರಲ್ಲಿ ಎಸ್. ಕೆ. ಪಾಟೀಲ ಅವರ ಪ್ಯಾನೆಲ್ ಭರ್ಜರಿ ಗೆಲುವು ಸಾಧಿಸಿದೆ.

ಚುನಾವಣಾ ಕಣದಲ್ಲಿದ್ದ 11 ಶಿಕ್ಷಕರು ಮತ್ತು 4 ಶಿಕ್ಷಕಿಯರಲ್ಲಿ ಒಟ್ಟು 5 ಶಿಕ್ಷಕರು ಹಾಗೂ 2 ಶಿಕ್ಷಕಿಯರನ್ನು ಆಯ್ಕೆ ಮಾಡಬೇಕಾಗಿತ್ತು. ಈ ಪೈಕಿ ಎಸ್.ಕೆ. ಪಾಟೀಲ ಪ್ಯಾನೆಲ್‌ನಿಂದ ಶರಣಬಸವ ಪಾಟೀಲ, ದ್ಯಾಮಪ್ಪ ದ್ಯಾಮಣ್ಣವರ, ಮೋಹನ ಜಿ. ಮಾಂಡ್ರೆ, ಎಸ್.ಎಫ್. ಮಠದ ಅವರು ಶಿಕ್ಷಕರಾಗಿ ಹಾಗೂ ಯಾಸ್ಮಿನ್ ಶಿರಹಟ್ಟಿ, ಸರಸ್ವತಿ ಅಪ್ಪಣ್ಣವರ ಅವರು ಶಿಕ್ಷಕಿಯರಾಗಿ ಜಯಶೀಲರಾಗಿದ್ದಾರೆ.

ಇನ್ನೊಂದು ತಂಡದಿಂದ ಪರಪ್ಪ ಕರಿಗಾರ ಕೂಡಾ ವಿಜಯಶಾಲಿಯಾಗಿದ್ದಾರೆ. ಸಂಘದ ನೂತನ ನಿರ್ದೇಶಕರು ಶಿಕ್ಷಕರ ಧ್ವನಿಯಾಗಿ ಕಾರ್ಯನಿರ್ವಹಿಸಲಿ ಎಂದು ಶಿರಹಟ್ಟಿ ತಾಲೂಕಿನ ಎಲ್ಲಾ ಶಿಕ್ಷಕರು ಹಾಗೂ ಗುರುಮಾತೆಯರು ಅಭಿನಂದನೆ ಸಲ್ಲಿಸಿದ್ದಾರೆ.








**ಗದಗದಲ್ಲಿ ರಾಜ್ಯ ಮಟ್ಟದ ಸಾಹಿತ್ಯ ಸಮ್ಮೇಳನ: ಕನ್ನಡ ನುಡಿ ಸಡಗರಕ್ಕೆ ಭರ್ಜರಿ ಚಾಲನೆ ನೀಡಿದ ಡಾ.ಶಿವಪ್ಪ ಕುರಿ**

# ಸದೃಢ ಸಮಾಜ ನಿರ್ಮಿಸುವ ಸಾಹಿತ್ಯ ರಚನೆಗೊಳ್ಳಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮನದ ಕತ್ತಲೆಯನ್ನು ಕಳೆದು ಸಮಾಜದ ಸ್ವಾಸ್ಥ್ಯ ಕಾಪಾಡುವಂತಹ ರಚನಾತ್ಮಕ ಹಾಗೂ ಆರೋಗ್ಯಕರ ಸಾಹಿತ್ಯ ರಚನೆಗೊಳ್ಳಲು ಯುವ ಬರಹಗಾರರು ಮುಂದಾಗಬೇಕು ಎಂದು ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಡಾ. ಶಿವಪ್ಪ ಕುರಿ ಅಭಿಪ್ರಾಯಪಟ್ಟರು.

ರವಿವಾರ ನಗರದ ಲಾಯನ್ಸ್ ಭವನದಲ್ಲಿ ಕರ್ನಾಟಕ ರಾಜ್ಯ ಲೇಖಕಿಯರ ಸಂಘ (ಗದಗ ಜಿಲ್ಲಾ ಘಟಕ), ಶರಣೆ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆ (ಗದಗ ಜಿಲ್ಲಾ ಘಟಕ), ಧಾರವಾಡದ ಚೇತನ ಫೌಂಡೇಶನ್ ಹಾಗೂ ಬೆಂಗಳೂರಿನ ಗಂಧದ ಗುಡಿ ಕನ್ನಡ ಸಂಘ ವತಿಯಿಂದ ಆಯೋಜಿಸಲಾದ ರಾಜ್ಯ ಮಟ್ಟದ 'ಕನ್ನಡ ನುಡಿ ಸಡಗರ' ಸಾಹಿತ್ಯ ಸಮ್ಮೇಳನಕ್ಕೆ ಕವನ ವಾಚನದ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಓದುಗರಿಗೆ ಬೇಕಾಗಿರುವುದು ರಚನಾತ್ಮಕ ಹಾಗೂ ವೈಚಾರಿಕ ಚಿಂತನಶೀಲ ಸಾಹಿತ್ಯವೇ ಹೊರತು, ಅಂಧಕಾರ ಮತ್ತು ಮೌಢ್ಯತೆಯನ್ನು ಬಿತ್ತುವ ಸಾಹಿತ್ಯವಲ್ಲ. ಸದೃಢ ಸಮಾಜ ನಿರ್ಮಿಸುವ ಸಾಹಿತ್ಯವೇ ಬರಬೇಕು ಎಂದು ಅವರು ಹೇಳಿದರು.

ರಾಜ್ಯ ಸರ್ಕಾರದ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ ಪುರಸ್ಕೃತರಾದ ಮುಖ್ಯೋಪಾಧ್ಯಾಯಿನಿ ಹಾಗೂ ಸಾಹಿತಿ ಶ್ರೀಮತಿ ರತ್ನಾ ಗಿರೋಸಾ ಬದಿ ಅವರನ್ನು ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿಸಿರುವುದು ಶ್ಲಾಘನೀಯ ಎಂದು ಬಣ್ಣಿಸಿದರು.

ಸಮ್ಮೇಳನದ ಸರ್ವಾಧ್ಯಕ್ಷತೆಯನ್ನು ಸಾಹಿತಿ ಶ್ರೀಮತಿ ರತ್ನಾ ಗಿರೋಸಾ ಬದಿ ವಹಿಸಿದ್ದರು. ಅಧ್ಯಕ್ಷತೆಯನ್ನು ಚೇತನ ಫೌಂಡೇಶನ್ ಅಧ್ಯಕ್ಷ ಚಂದ್ರಶೇಖರ ಮಾಡಲಗೇರಿ ವಹಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಗಣ್ಯ ವರ್ತಕ ವಿವೇಕಾನಂದ ಗುಡಿಮನಿ, ಶ್ರೀಮತಿ ಚಂಪಾ ಚಂದ್ರಶೇಖರ ಪಾಟೀಲ ಹಾಗೂ ಸಾಹಿತಿ ಜಿ.ಎಸ್. ಪಾಟೀಲ ಭಾಗವಹಿಸಿದ್ದರು.

ಕಾರ್ಯಕ್ರಮದ ಆರಂಭದಲ್ಲಿ ಹಿರಿಯ ಸಂಗೀತ ಕಲಾವಿದೆ ಶ್ರೀಮತಿ ದೀಪ್ತಿ ಪಾಠಕ ಪ್ರಾರ್ಥಿಸಿದರು. ಡಾ. ಜಿ. ಪ್ರೇಮಾ ನಿರೂಪಣೆ ಮಾಡಿದರು. ಕಾವ್ಯಾ ದಂಡಿನ ಸ್ವಾಗತಿಸಿ ಪರಿಚಯಿಸಿದರು. ಕೊನೆಗೆ ಪ್ರಾಚಾರ್ಯರಾದ ಶ್ರೀಮತಿ ವಿಜಯಲಕ್ಷ್ಮಿ ಕಮತರ ವಂದಿಸಿದರು.

ಸಮಾರಂಭಕ್ಕೂ ಮುನ್ನ ನಗರದ ಮಹಾತ್ಮಾ ಗಾಂಧಿ ವೃತ್ತದಿಂದ ಸಾಹಿತಿ ಶ್ರೀಮತಿ ರತ್ನಾ ಗಿರೋಸಾ ಬದಿ ಅವರನ್ನು ಮೆರವಣಿಗೆಯೊಂದಿಗೆ ವೇದಿಕೆಯವರೆಗೆ ಬರಮಾಡಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಸುಜಾತಾ ಪಾಟೀಲ, ನಿರ್ಮಲಾ ಚಿತ್ತಾಮೂರ, ಶಕುಂತಲಾ ಬಂಡಿ, ರೇಖಾ ರೊಟ್ಟಿ, ಚಂದ್ರಕಲಾ ಸ್ಥಾವರಮಠ, ವಿಜಯಲಕ್ಷ್ಮಿ ಹಳ್ಳಿ, ಸಂಧ್ಯಾ ಕೋಟಿ, ಸುಶೀಲಾ ಕೋಟಿ, ವೀಣಾ ಕಾವೇರಿ, ಮೀನಾಕ್ಷಿ ಕೊರವನವರ, ಬಸವಣ್ಣೆವ್ವ ಹರ್ತಿ, ಅರುಂಧತಿ ವೈಕುಂಠೆ, ಸಾಹಿತಿ ಎ.ಎಸ್. ಮಕಾನದಾರ, ಪ್ರೊ. ಸಿದ್ದಲಿಂಗೇಶ ಸಜ್ಜನಶೆಟ್ಟರ, ಪ್ರೊ. ಬಸವರಾಜ ನೆಲಜೇರಿ, ಶರಣಪ್ಪ ಹೊಸಂಗಡಿ, ಆರ್.ಎಸ್. ತ್ರಿಮಲ್ಲೆ, ಚಂದ್ರಶೇಖರ ಪಾಟೀಲ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾಹಿತಿಗಳು ಹಾಗೂ ಗಣ್ಯರು ಭಾಗವಹಿಸಿದ್ದರು.




"ಸಮಾಜದ ಸ್ವಾಸ್ಥ್ಯ ಕಾಪಾಡುವ, ಚಿಂತನಶೀಲತೆ ಬೆಳೆಸುವ ಸಾಹಿತ್ಯವೇ ಅಗತ್ಯ. ಯುವ ಬರಹಗಾರರು ಈ ದಿಸೆಯಲ್ಲಿ ಮುಂದೆ ಬರಬೇಕು,"

– ಡಾ. ಶಿವಪ್ಪ ಕುರಿ,
ಮಾಜಿ ಜಿಲ್ಲಾ ಅಧ್ಯಕ್ಷರು, ಕಸಾಪ

ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರಿಗೆ 'ಕದಳಿಶ್ರೀ ಪ್ರಶಸ್ತಿ' ಪ್ರದಾನ ಮಾಡಲಾಯಿತು. ಪ್ರಶಸ್ತಿಯನ್ನು ಶ್ರೀಮತಿ ರತ್ನಾ ಗಿರೋಸಾ ಬದಿ, ಶ್ರೀಮತಿ ಶಿವಶಾಂತಾ ಬಿಸನಳ್ಳಿ, ಶ್ರೀಮತಿ ಪುಷ್ಪಲತಾ ಬಸವರಾಜ ಬಳ್ಳಾರಿ, ಶ್ರೀಮತಿ ಚಂಪಾ ಚಂದ್ರಶೇಖರ ಪಾಟೀಲ, ಶ್ರೀಮತಿ ಸುಮತಿ ಮುರುಗೇಶ ಗದಗಿನಮಠ, ಶ್ರೀಮತಿ ಉಡಚಮ್ಮ ಮುದಿಯಪ್ಪ ವಾಲ್ಮೀಕಿ ಅವರಿಗೆ ನೀಡಲಾಯಿತು. 'ಶರಣಶ್ರೀ ಪ್ರಶಸ್ತಿ'ಯನ್ನು ಡಾ. ದತ್ತಾತ್ರೇಯ ವೈಕುಂಠೆ ಅವರಿಗೆ ನೀಡಿ ಸನ್ಮಾನಿಸಲಾಯಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka